♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ

E-mail:kayakayogi @gmail.com

website: www.kayakayogi.com

ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

Connecting hearts in the cultural capital

ASK ಮೈಸೂರು

#askmysuru

RNI NO.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ volume 07 | ಸಂಚಿಕೆ Issue 16 | ಶನಿವಾರ Saturday | 20-04-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ಲಿಂಗಾಯತರಿಗೆ ಸಿಎಂ ಹುದ್ದೆ ವಂಚಿಸಿದ ಎಚ್‌ಡಿಕೆ

ಬಸವ ತತ್ವದ ಆದಾರದ ಕಾಂಗ್ರೆಸ್ ಬೆಂಬಲಿಸಿ – ಸ್ಟಾರ್ ಚಂದ್ರು ಗೆಲ್ಲಿಸಿ: ಎಂ.ಬಿ.ಪಾಟೀಲ್

■ ಕಾಯಕಯೋಗಿ ಸುದ್ದಿ

ಮಂಡ್ಯ: ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿಯಾಗಿ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಿರುವ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ನಮ್ಮ ಸಮುದಾಯದ ಬಿ.ಎಸ್.ಯಡಿಯೂರಪ್ಪ ಅವರಿಗೆ ಸಿಗಬೇಕಾಗಿದ್ದ ಮುಖ್ಯಮಂತ್ರಿ ಹುದ್ದೆಯನ್ನು ತಪ್ಪಿಸಿ ವಚನ ಭ್ರಷ್ಟರಾಗಿರುವುದನ್ನು ಜನತೆ ಮರೆತಿಲ್ಲ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಆಕ್ರೋಶ ವ್ಯಕ್ತಪಡಿಸಿದರು.





ನಗರದ ಕನಕ ಭವನದಲ್ಲಿ ನಡೆದ ಕಾಂಗ್ರೆಸ್ ಬೆಂಬಲಿತ ವೀರಶೈವ ಲಿಂಗಾಯತ ಜನಜಾಗೃತಿ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

2008ರಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಮಾಡಿಕೊಂಡು ಸರ್ಕಾರ ರಚಿಸಿದರು. ಮೊದಲ ಅವಧಿಯಲ್ಲಿ ಮುಖ್ಯಮಂತ್ರಿ ಸ್ಥಾನ ಅಲಂಕರಿಸಿ ಅಧಿಕಾರ ಅನುಭವಿಸಿದ ಎಚ್.ಡಿ. ಕುಮಾರಸ್ವಾಮಿ ಒಪ್ಪಂದದಂತೆ ಇನ್ನುಳಿದ 20 ತಿಂಗಳ ಅವಧಿಗೆ ಲಿಂಗಾಯತ ಸಮುದಾಯದ ಬಿ.ಎಸ್.ಯಡಿ ಯೂರಪ್ಪ ಅವರಿಗೆ ಸಿಎಂ ಸ್ಥಾನ ನೀಡದೆ ದೊಡ್ಡ ಅನ್ಯಾಯ ವೆಸಗಿ ರಾಜಕೀಯ ವಂಚನೆ ಮಾಡಿರುವುದನ್ನು ಸಮುದಾಯ ಅರಿತುಕೊಳ್ಳಬೇಕೆಂದರು.

ಬಸವತತ್ವದ ಆದಾರದಲ್ಲಿ ಕಾಂಗ್ರೆಸ್ ಆಡಳಿತ: ಬಿಜೆಪಿ ಪಕ್ಷ ಸಮಾನತೆಯ ಹರಿಕಾರ ಬಸವಣ್ಣನವರ ತತ್ವ ಸಿದ್ಧಾಂತವನ್ನು ಎಂದಿಗೂ ಒಪ್ಪುವುದಿಲ್ಲ, ಅಷ್ಟೇ ಅಲ್ಲದೆ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂಬುದನ್ನೂ ಒಪ್ಪುವುದಿಲ್ಲ. ಆದರೆ, ಕಾಂಗ್ರೆಸ್ ಪಕ್ಷ ಅಂಬೇಡ್ಕರ್ ಅವರ ಸಂವಿಧಾನ ಮತ್ತು ಬಸವಣ್ಣನವರ ಸಿದ್ಧಾಂತದ ಮೇಲೆ ಹೆಚ್ಚಿನ ನಂಬಿಕೆ ಇಟ್ಟಿದೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷ ಹೀನಾಯವಾಗಿ ಸೋತ ಹಿನ್ನೆಲೆಯಲ್ಲಿ ಬಿ.ಎಸ್ ಯಡಿಯೂರಪ್ಪರ ಪುತ್ರ ಬಿ.ವೈ. ವಿಜಯೇಂದ್ರರನ್ನ ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಮಾಡಲಾಗಿದೆ ಎಂದರು.

ವೀರಶೈವ–ಲಿಂಗಾಯಿತ ಸಮುದಾಯ ಓಲೈಕೆ ಮಾಡಲು ಇಂತಹ ತಂತ್ರ ಮಾಡಿರುವ ಬಿಜೆಪಿ ವರಿಷ್ಠರು ಕೇವಲ 3 ವರ್ಷ ಮಾತ್ರ ರಾಜ್ಯಾಧ್ಯಕ್ಷ ಎಂದು ವಿಜಯೇಂದ್ರ ಅವರಿಗೆ ನಿಗದಿ ಮಾಡಿದೆ. ಅಷ್ಟರೊಳಗೆ ಎಲ್ಲಾ ಚುನಾವಣೆ ಮುಗಿಯುತ್ತದೆ. ಇನ್ನೇಕೆ ಇವರು ಎಂಬ ಭಾವನೆ ಇಟ್ಟುಕೊಂಡಿದೆ. ಮುಂದಿನ ವಿಧಾನಸಭಾ ಚುನಾವಣೆ ವೇಳೆಗೆ ಪಕ್ಷದ ಅಧ್ಯಕ್ಷ ಸ್ಥಾನವು ಲಿಂಗಾಯತ ಸಮುದಾಯದ ಕೈತಪ್ಪಲಿದೆ. ಆದರೆ ಕಾಂಗ್ರೆಸ್ ಪಕ್ಷ ಸಮುದಾಯದ ಹಿಚ್ಚಿದವರನ್ನು ಮುಖ್ಯಮಂತ್ರಿಯಾಗಲು ಅವಕಾಶ ಕಲ್ಪಿಸಿದೆ ಎಂದು ವಿವರಿಸಿದರು.

ಈ ಹಿಂದೆ 20–20 ತಿಂಗಳ ಅಧಿಕಾರ ಹಂಚಿಕೆ ಸೂತ್ರದಂತೆ ಮುಖ್ಯಮಂತ್ರಿಯಾದ ಎಚ್.ಡಿ.ಕುಮಾರಸ್ವಾಮಿ 20 ತಿಂಗಳ ಆಡಳಿತ ನಡೆಸಿದ ಬಳಿಕ ಬಿ.ಎಸ್.ಯಡಿಯೂರಪ್ಪ ಅವರಿಗೆ ಅಧಿಕಾರ ಹಸಿಸದೆ ವಂಚಿಸಿದ್ದನ್ನು ವೀರಶೈವ ಲಿಂಗಾಯಿತರು ಮರೆತಿಲ್ಲ. ಹೀಗೆ ನಮ್ಮ ಸಮುದಾಯಕ್ಕೆ ಅನ್ಯಾಯ ಮಾಡಿದವರು ಈಗ ಯಡಿಯೂರಪ್ಪನವರನ್ನು ತಮ್ಮ ಸ್ವಾರ್ಥಕ್ಕೆ ಬಳಸಿಕೊಳ್ಳುತ್ತಿರುವ ಕುಮಾರಸ್ವಾಮಿ ಅವರಿಗೆ ಈ ಬಾರಿ ಮಂಡ್ಯ ಜನರೇ ತಕ್ಕ ಪಾಠ ಕಲಿಸಲಿದ್ದಾರೆಂದು ಗುಡುಗಿದರು.

ಗ್ಯಾರಂಟಿ ಯೋಜನೆಗಳಿಂದ ಜನ ಸಾಮಾನ್ಯರಿಗೆ ಹೆಚ್ಚಿನ ಅನುಕೂಲವಾಗುತ್ತಿದೆ. ಮಹಿಳೆಯರಿಗೆ ಹೆಚ್ಚಿನ ಸವಲತ್ತು ದೊರಕಿದೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಕೇಂದ್ರದಿಂದ ಹೆಚ್ಚಿನ ಗ್ಯಾರಂಟಿ ಲಾಭ ಮಹಿಳೆಯರು, ರೈತರು, ಕಾರ್ಮಿಕರಿಗೆ ಸಿಗಲಿದೆ. ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡರಿಗೆ ಮತ ನೀಡುವ ಮೂಲಕ ಸಮುದಾಯದ ಜನತೆ ಗಳಿಸಿ ಕೊಡಬೇಕು ಮುಂದಿನ ದಿನಗಳಲ್ಲಿ ವೀರಶೈವ ಲಿಂಗಾಯತ ಸಮುದಾಯದ ಜನತೆಗೆ ರಾಜಕೀಯ ಸ್ಥಾನಮಾನ ದೊರಕಿಸಿಕೊಡಲು ಬದ್ಧನಾಗಿರುವುದಾಗಿ ತಿಳಿಸಿದರು.

6ನೇ ಪುಟಕ್ಕೆ

ವಿದ್ಯಾರ್ಥಿನಿ ಕೊಲೆಗೈದವನ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ: ಪಾಟೀಲ್

■ ಕಾಯಕಯೋಗಿ ಸುದ್ದಿ

ಮಂಡ್ಯ : ಹುಬ್ಬಳ್ಳಿಯಲ್ಲಿ ನಡೆದ ವಿದ್ಯಾರ್ಥಿನಿ ನೇಹಾ ಹತ್ಯೆ ವ್ಯೆಯಕ್ತಿಕವಾದ ಘಟನೆ. ಅದನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ಕೊಲೆ ಮಾಡಿದವನ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಲೆ ಮಾಡಿದವನಿಗೆ ಕಠಿಣವಾದ ಶಿಕ್ಷೆ ಕೊಡಿಸುವ ಕೆಲಸ ನಮ್ಮ ಸರ್ಕಾರ ಮಾಡುತ್ತೆ. ಒಬ್ಬ ವ್ಯಕ್ತಿ ಮಾಡಿದ ತಪ್ಪಿಗೆ ಒಂದು ಸಮಾಜವನ್ನು ದೂಷಿಸಬಾರದು. ನಾನು ತಪ್ಪು ಮಾಡಿದರೆ ಇಡೀ ಲಿಂಗಾಯತ ಸಮಾಜ ತಪ್ಪು ಎನ್ನುವುದಕ್ಕೆ ಆಗುವುದಿಲ್ಲ. ನಾವು ಯಾರನ್ನು ಸಮರ್ಥನೆ ಮಾಡಿಕೊಳ್ಳಲ್ಲ ಎಂದರು. ನಾವು ಈ ಘಟನೆಯನ್ನು ತೀವ್ರವಾಗಿ ಖಂಡಿಸುತ್ತೇವೆ. ಇದು ಅತ್ಯಂತ ಹೇಯ ಕೃತ್ಯ. ಈಗಾಗಲೇ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ. ಆತನ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ. ಕಾಂಗ್ರೆಸ್ ಪಕ್ಷ ಇದಕ್ಕೆಲ್ಲ ಬೆಂಬಲ ಕೊಡಲ್ಲ. ಕೆಲವರು ಬಂಡವಾಳ ಇಲ್ಲದವರು, ಬದುಕು ಕಟ್ಟಿಕೊಳ್ಳಲು ಆಗುತ್ತಿಲ್ಲ.

ವೀರಶೈವ ಲಿಂಗಾಯತ ಸಮುದಾಯದ ಏಳ್ಗೆಗೆ ಕಾಂಗ್ರೆಸ್ ಬದ್ಧ

■ ಕಾಯಕಯೋಗಿ ಸುದ್ದಿ

ಮಂಡ್ಯ ಜಿಲ್ಲೆಯ ಒಕ್ಕಲಿಗರು ಸೇರಿದಂತೆ ಎಲ್ಲಾ ಸಮುದಾಯದ ಜನತೆಯೊಂದಿಗೆ ಸೌಹಾರ್ಧ್‌ಯುತವಾಗಿ ಕಾರ್ಯಕ, ದಾಸೋಹದ ತತ್ವದಡಿಯಲ್ಲಿ ಸಾಗಿರುವ ವೀರಶೈವ ಲಿಂಗಾಯತ ಸಮುದಾಯದ ಏಳ್ಗೆಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿದೆ ಎಂದು ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು.



ನಗರದ ಕನಕ ಭವನದಲ್ಲಿ ನಡೆದ ಕಾಂಗ್ರೆಸ್ ಬೆಂಬಲಿತ ವೀರಶೈವ ಲಿಂಗಾಯತ ಜನಜಾಗೃತಿ ಸಭೆಯಲ್ಲಿ ಪಾಲ್ಗೊಂಡು ವಿವಿಧ ವೀರಶೈವ ಲಿಂಗಾಯತ ಸಂಘಟನೆಗಳು ನೀಡಿದ ಮನವಿಪತ್ರವನ್ನು ಸ್ವೀಕರಿಸಿ ಮಾತನಾಡಿದರು.

ಜಿಲ್ಲಾ ಪಂಚಾಯತಿ ಸದಸ್ಯನಾಗಿದ್ದಾಗ ಪ್ರಥಮ ಬಾರಿಗೆ ಜಗದಾಂಬ ಅವರನ್ನು ಉಪಾಧ್ಯಕ್ಷರನ್ನಾಗಿ ಹಾಗೂ ಮಳವಳ್ಳಿಯ ಸುಧಾಚಂದ್ರಶೇಖರ್ ಅವರನ್ನು ಅಧ್ಯಕ್ಷರನ್ನಾಗಿ ಮಾಡುವ ಮೂಲಕ ಸಮುದಾಯದ ಮಹಿಳೆಯರ ರಾಜಕೀಯ ಮುನ್ನಡೆಗೆ ಸಹಕಾರ ಮಾಡಿದ್ದ ನಾನು ಮುಂಬರುವ ದಿನಗಳಲ್ಲಿ ವೀರಶೈವ ಲಿಂಗಾಯತರಿಗೆ ರಾಜಕೀಯ ಪ್ರಾತಿನಿಧ್ಯತೆ ನೀಡುವುದಾಗಿ ತಿಳಿಸಿದರು.

ಮಂಡ್ಯದಲ್ಲಿ ಬಸವ ಭವನ ನಿರ್ಮಾಣ ಮಾಡಬೇಕು ಹಾಗೂ ಅಶ್ವಾರೂಢ ಬಸವೇಶ್ವರರ ಪುತ್ಥಳಿಯನ್ನು ಸ್ಥಾಪಿಸಬೇಕೆಂಬ ವೀರಶೈವ–ಲಿಂಗಾಯತರ ಹಲವು ದಿನಗಳ ಬೇಡಿಕೆಯನ್ನು ಈಡೇರಿಸಲು ನಮ್ಮ ಸರ್ಕಾರ ಸಿದ್ಧವಿದೆ ಎಂದರು.

6ನೇ ಪುಟಕ್ಕೆ

ಸಾಲದ ಶೂಲಕ್ಕೆ ಬಲಿಯಾದ ಕಾಲೇಜು ಉಪನ್ಯಾಸಕ..!

■ ಕಾಯಕಯೋಗಿ ಸುದ್ದಿ

ನಂಜನಗೂಡು : ಸಾವಿರಾರು ವಿದ್ಯಾರ್ಥಿಗಳಿಗೆ ಪಾಠ ಪ್ರವಚನ ಮಾಡಿ ದಾರಿದೀಪವಾಗಬೇಕಿದ್ದ ಕಾಲೇಜು ಉಪನ್ಯಾಸಕ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಂಜನಗೂಡು ತಾಲ್ಲೂಕಿನ ಹೊಸಹಳ್ಳಿ ಗೇಟ್ ನಲ್ಲಿ ನಡೆದಿದೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಇಂಗಲವಾಡಿ ಗ್ರಾಮದ ಮಹದೇವಪ್ಪ ಎಂಬವರ ಪುತ್ರ ಮಾದಪ್ಪ 45 ವರ್ಷದ ಮೃತ ಉಪನ್ಯಾಸಕ ಎಂದು ತಿಳಿದು ಬಂದಿದೆ.



ನಂಜನಗೂಡು ಪಟ್ಟಣದ ಪಿ.ಇ ಲೇಔಟ್ ನಲ್ಲಿ ಸ್ವಂತ ಮನೆಯಲ್ಲಿ ವಾಸವಾಗಿದ್ದರು. ಕಳೆದ ಎರಡು ವರ್ಷಗಳ ಹಿಂದೆ ನೂತನ ಮನೆ ಗೃಹಪ್ರವೇಶವು ಕೂಡ ನಡೆದಿತ್ತು. ಜಾವಾರಾಜನಗರ ಜಿಲ್ಲಾ ಕೇಂದ್ರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಸಾಕಷ್ಟು ವರ್ಷ ಗಳಿಂದಲೂ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದರು. ಮೃತ ಉಪನ್ಯಾಸಕ ಮಾದಪ್ಪ ಎಂಬುವವರ ಪತ್ನಿ ಪೂರ್ಣಿಮಾ ಎಂಬುವರು ಕೂಡ ಜೆಎಸ್‌ಎಸ್ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದು, ಪತಿ ಪತ್ನಿ ಅನ್ಯೋನ್ಯವಾಗಿ ಜೀವನ ಸಾಗಿಸುತ್ತಿದ್ದ ಇವರಿಬ್ಬರಿಗೆ 16 ವರ್ಷದ ಪುತ್ರಿಯೂ ಕೂಡ ಇದ್ದಾಳೆ ಎಂಬ ಮಾಹಿತಿ ತಿಳಿದು ಬಂದಿದೆ.

ವಿಷಯ ತಿಳಿದು ಸ್ಥಳಕ್ಕೆ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯ ಪಿಎಸ್‌ಐ ರಘು, ಶ್ವಾನದಳ ಮತ್ತು ಬೆರಳಚ್ಚು ತಜ್ಞರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣವನ್ನು ದಾಖಲು ಮಾಡಿಕೊಂಡು ಶವವನ್ನು ನಂಜನಗೂಡು ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಿದ್ದಾರೆ.

ಈಗಾಗಲೇ ನಿರ್ಜನ ಪ್ರದೇಶದಲ್ಲಿ ಆತ್ಮಹತ್ಯೆ ಮಾಡಿಕೊಂಡು ಸಾವಿಗೆ ಶರಣಾಗಿರುವ ಉಪನ್ಯಾಸಕನ ಸಾವಿನ ಸುತ್ತ ಅನುಮಾನದ ಹುತ್ತ ಬೆಳೆದು ನಿಂತಿದೆ..? ಪೊಲೀಸರ ತನಿಖೆ ಬಳಿಕ ಸ್ಪಷ್ಟ ಮಾಹಿತಿ ತಿಳಿದು ಬರಲಿದೆ. ಈ ಸಂಬಂಧ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪೊಲೀಸರ ಮಿಂಚಿನ ಕಾರ್ಯಾಚರಣೆ, ಮಕ್ಕಳ ಕಳ್ಳರ ಬಂಧನ

■ ಕಾಯಕಯೋಗಿ ಸುದ್ದಿ

ಮೈಸೂರು: ಮಿಂಚಿನ ಕಾರ್ಯಾಚರಣೆ ನಡೆಸಿದ ಪೊಲೀಸರು ಮಗುವನ್ನು ಅಪಹರಿಸಿದ್ದ ಐವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ವಿಜಯನಗರ ಠಾಣೆ ಪೊಲೀಸರು, ಪ್ರಕರಣ ದಾಖಲಾದ ಕೇವಲ 4 ಗಂಟೆಯಲ್ಲಿ ಮಗುವನ್ನು ಅಪಹರಿಸಿದ್ದ ಐವರು ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಹೂಟಗಳ್ಳಿಯ ದೊಡ್ಡ ಅರಳೀಮರದ ಮಂಜುನಾಥ, ಇಲವಾಲ ಹೋಬಳಿಯ ನಾಗವಾಲದ ಇಂದ್ರಕುಮಾರ್, ಪಾಂಡವಪುರ ತಾಲೂಕಿನ ಡಾಬರಹಳ್ಳಿಯ ಕುಮಾರ್, ಇಲವಾಲ ಹೋಬಳಿಯ ನಾಗವಾಲದ ಸುಪ್ರಿಯಾ ಹಾಗೂ ವಿಜಯಲಕ್ಷ್ಮೀ ಬಂಧಿತರು.

ಮೈಸೂರಿನ ಹಿನಕಲ್ ವರ್ತುಲ ರಸ್ತೆಯ ಜೋಪಡಿಯಲ್ಲಿ ಬುಧವಾರ ಬೆಳಗ್ಗೆ 3ಕ್ಕೆ ಬಿಹಾರದ ಅಲೆಮಾರಿ ಸಮುದಾಯದ ಎಲ್ಲರೂ ಮಲಗಿರುವ ಸಂದರ್ಭ 40 ದಿನದ ಗಂಡು ಮಗುವನ್ನು ಆರೋಪಿಗಳು ಅಪಹರಿಸಿದ್ದರು. ಈ ಕುರಿತು ಮಗುವಿನ ತಾಯಿ ರಾಮಡಲ್ಲಿ ದೇವಿ ನೀಡಿದ ದೂರಿನ ಮೇರೆಗೆ ವಿಜಯನಗರ ಪೊಲೀಸರು ಆರೋಪಿಗಳ ಪತ್ತೆಗೆ ವಿಶೇಷ ತಂಡ ರಚಿಸಿದ್ದರು. ಸದ್ಯ ಪೊಲೀಸರು ಆರೋಪಿಗಳನ್ನು ಬಂಧಿಸಿ ಮಗುವನ್ನು ರಕ್ಷಿಸಿದ್ದಾರೆ.

ಕಾನೂನು ಮತ್ತು ಸುವ್ಯವಸ್ಥೆಯ ಉಪ ಪೊಲೀಸ್ ಆಯುಕ್ತ ಮುತ್ತುರಾಜ್, ವಿಜಯನಗರ ಉಪ ವಿಭಾಗದ ಎಸಿಪಿ ಗಜೇಂದ್ರ ಪ್ರಸಾದ್ ಉಸ್ತುವಾರಿಯಲ್ಲಿ ವಿಜಯನಗರ ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಬಿ.ಆರ್. ಪ್ರದೀಪ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಪಿಎಸ್‌ಐಗಳಾದ ವಿಶ್ವನಾಥ, ಕೆ.ನಾರಾಯಣ, ವನಜಾಕ್ಷಿ, ಸಿಬ್ಬಂದಿ ಶಿವಕುಮಾರ್, ಲಿಖಿತ್, ಮುರುಳಿಗೌಡ, ಸಂಜಯ್, ಅಣ್ಣಪ್ಪ ದೇವಾಡಿಗ, ನಂದೀಶ್, ಶ್ರೀನಿವಾಸಮೂರ್ತಿ, ಪ್ರಭಾಕರ್, ಸಿಡಿಆರ್ ಕುಮಾರ್ ಇದ್ದರು.

ನರೇಂದ್ರ ಮೋದಿಯವರು ಭ್ರಮಾಲೋಕವನ್ನೇ ಸೃಷ್ಟಿಸಿದರು
ಕರ್ನಾಟಕಕ್ಕೆ ಅನ್ಯಾಯವಾದಾಗ ಪ್ರಜ್ವಲ್ ರೇವಣ್ಣ, ದೇವೇಗೌಡ ಬಾಯಿ ಬಿಟ್ಟಿಲ್ಲ

■ ಕಾಯಕಯೋಗಿ ಸುದ್ದಿ

ಹಾಸನ(ಸಕಲೇಶಪುರ):. ಜಂತರ್ ಮಂತರ್ ಬಳಿ ಕರ್ನಾಟಕಕ್ಕೆ ಅನ್ಯಾಯವಾಗಿರುವ ಬಗ್ಗೆ ಪ್ರತಿಭಟನೆಯಾದಾಗ ಪ್ರಜ್ವಲ್ ರೇವಣ್ಣ, ದೇವೇಗೌಡ ಬಾಯಿ ಬಿಟ್ಟರೇ? ಜನಗಳ ಪ್ರತಿನಿಧಿಯಾಗಿ ಲೋಕಸಭೆಯಲ್ಲಿ ಮಾತನಾಡದಿದ್ದರೆ ಯಾಕೆ ಹೋಗಬೇಕು? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಹಾಸನ ಲೋಕಸಭಾ ಕ್ಷೇತ್ರದ ಸಕಲೇಶಪುರದಲ್ಲಿ ತಮ್ಮ ಪಕ್ಷದ ಅಭ್ಯರ್ಥಿ ಶ್ರೇಯಸ್ ಪಟೇಲ್ ಅವರ ಪರವಾಗಿ ಪ್ರಜಾಧ್ವನಿ–02 ಲೋಸಭಾ ಚುನಾವಣಾ ಪ್ರಚಾರದಲ್ಲಿ ಭಾಗವಹಿಸಿ ಮಾತನಾಡಿದರು.

ಪ್ರಜ್ವಲ್ ರೇವಣ್ಣ 5 ವರ್ಷ ಸಂಸದರಾಗಿ ಏನಾದರೂ ಮಾಡಿದ್ದಾರೆಯೇ? ಕೇಂದ್ರ ಸರ್ಕಾರ ಕರ್ನಾಟಕಕ್ಕೆ ತೆರಿಗೆ ಪಾಲು ನೀಡದೆ ಅನ್ಯಾಯ ಮಾಡಿದಾಗಲೂ ಏನೂ ಮಾತನಾಡಲಿಲ್ಲ. ಕರ್ನಾಟಕದಿಂದ ಕೇಂದ್ರಕ್ಕೆ ಕೊಡುವ ತೆರಿಗೆ 4.30 ಲಕ್ಷ ಕೋಟಿ ರೂ.ಗಳು. ನಮಗೆ ವಾಪಸ್ಸು ಬರುವುದು 55 ಕೋಟಿ ರೂ.ಗಳು ಮಾತ್ರ. ಇದು ಅನ್ಯಾಯವಲ್ಲವೇ? ಎಂದರು.



ಕೇಂದ್ರದ ಮಲತಾಯಿ ಧೋರಣೆ: ಬಿಜೆಪಿಯಿಂದ 25 ಜನ ಸಂಸದರಾಗಿದ್ದರು. ಈಗ 27 ಜನರಾಗಿದ್ದಾರೆ. ಇವರು ಯಾರು ಬಾಯಿ ಬಿಡಲಿಲ್ಲ. ನೀರಾವರಿ, ಬರಗಾಲಕ್ಕೆ ಹಣ ಬಿಡುಗಡೆ ಮಾಡಲಿಲ್ಲ. ಕೇಂದ್ರ ಸರ್ಕಾರಕ್ಕೆ ಮನವಿಯನ್ನು ಕೊಟ್ಟು ಆರು ತಿಂಗಳಾದರೂ ಒಂದು ರೂಪಾಯಿಯನ್ನೂ ಬಿಡುಗಡೆ ಮಾಡಿಲ್ಲ. ನರೇಂದ್ರ ಮೋದಿಯವರಿಗೆ ಕರ್ನಾಟಕ ನೆನಪಾಗುವುದು ಚುನಾವಣೆ ಬಂದಾಗ ಮಾತ್ರ. ಬರಗಾಲ, ಪ್ರವಾಹ ಬಂದಾಗ ಬರಲಿಲ್ಲ. ರಾಜ್ಯದ ಬಗ್ಗೆ ಮಲತಾಯಿ ಧೋರಣೆಯನ್ನು ಅನುಸರಿಸುತ್ತಿದ್ದಾರೆ. ಈ ಬಗ್ಗೆ ನಿಮಗೆ ಕೋಪ ಬಂದಿದ್ದರೆ ಪ್ರಜ್ವಲ್ ರೇವಣ್ಣ ಅವರನ್ನು ಸೋಲಿಸಿ ಕಾಂಗ್ರೆಸ್ ಅಭ್ಯರ್ಥಿಯನ್ನು ಲೋಕಸಭೆಗೆ ಕಳುಹಿಸುವ ತೀರ್ಮಾನ ಮಾಡಲೇಬೇಕು ಎಂದರು.

10 ವರ್ಷಗಳಲ್ಲಿ ನರೇಂದ್ರ ಮೋದಿಯವರು ರೈತರು ಬಡವರಿಗೆ ಯಾವ ಕಾರ್ಯಕ್ರಮವನ್ನೂ ಹಮ್ಮಿಕೊಂಡಿಲ್ಲ ಹಾಗೂ ನುಡಿದಂತೆ ನಡೆದುಕೊಂಡಿಲ್ಲ. ಸಾಮಾಜಿಕ ವಾಗಿ ಹಿಂದುಳಿದವರಿಗೆ ಶಕ್ತಿ ತುಂಬುವ ಕೆಲಸವನ್ನೂ ಮಾಡಿಲ್ಲ ಎಂದರು.

ನರೇಂದ್ರ ಮೋದಿಯವರು ಭ್ರಮಾಲೋಕವನ್ನೇ ಸೃಷ್ಟಿಸಿದರು. 15 ಲಕ್ಷ ರೂ.ಗಳನ್ನು ಪ್ರತಿಯೊಬ್ಬರಿಗೆ ಹಾಕಿಲ್ಲ. ಯಾಕೆ ಕೊಡಲಾಗಿಲ್ಲ ಎಂಬ ಬಗ್ಗೆ ಮಾತನಾಡಿಲ್ಲ. ಈ ಬಾರಿ ಬಿಜೆಪಿಯೊಡಿಗೆ ಜೆಡಿಎಸ್ ನವರೂ ಸೇರಿಕೊಂಡಿದ್ದಾರೆ. ವಾಜಪಾಮಗೋಚರವಾಗಿ ನರೇಂದ್ರ ಮೋದಿಯವರನ್ನು ಟೀಕಿಸುತ್ತಿದ್ದ ದೇವೇಗೌಡರು ಈಗ ಅವಿನಾಭಾವ ಸಂಬಂಧವಿದೆ ಎನ್ನುತ್ತಿದ್ದಾರೆ. ಈ ಅನಿರೀಕ್ಷಿತ ಪ್ರೀತಿಯ ಬಗ್ಗೆ ಜನ ವಿಚಾರ ಮಾಡಬೇಕು. ಸ್ವಾರ್ಥಕ್ಕಾಗಿ, ಕುಟುಂಬ ರಾಜಕಾರಣಕ್ಕಾಗಿ ಈಗ ನರೇಂದ್ರ ಮೋದಿಯವರನ್ನು ಅಪ್ಪಿಕೊಂಡಿದ್ದಾರೆ. ಬಡವರ ಕಷ್ಟ ಸುಖ, ಸಾಮಾನ್ಯ ಜನರ, ರೈತರಿಗಾಗಿ ಸೇರಿಲ್ಲ. ಕೇವಲ ಸ್ವಾರ್ಥಕ್ಕಾಗಿ ಸೇರಿಕೊಂಡಿದ್ದಾರೆ. ಅಳಿಯ, ಮಗ, ಮೊಮ್ಮಗನನ್ನು ನಿಲ್ಲಿಸಿದ್ದಾರೆ. ಕೋ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 20-04-2024

ಮಂಡ್ಯ

ಜಿಲ್ಲಾ ಮಟ್ಟದ ನಮ್ಮ ನಡೆ ಮತಗಟ್ಟೆಯ ಕಡೆ

■ ಕಾಯಕಯೋಗಿ ಸುದ್ದಿ

ಮಂಡ್ಯ : ಸಾರ್ವತ್ರಿಕ ಲೋಕಸಭಾ ಚುನಾವಣೆ 2024ರ ಸಂಬಂಧ ಮತದಾರರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಮಂಡ್ಯ ನಗರಸಭೆ ವ್ಯಾಪ್ತಿಯ ರೋಟರಿ ವಿದ್ಯಾಸಂಸ್ಥೆಯಲ್ಲಿ ಏ.21ರಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲಾ ಮಟ್ಟದ ನಮ್ಮ ನಡೆ ಮತಗಟ್ಟೆಯಂ ಕಡೆ ಎಂಬ ಚುನಾವಣಾ ಧ್ವಜಾರೋಹಣ ಕಾರ್ಯಕ್ರಮವನ್ನು ರಾಷ್ಟ್ರೀಯ ಹಬ್ಬದ ಮಾದರಿಯಲ್ಲಿ ಆಚರಿಸಲಾಗುವುದು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಸದಸ್ಯ ಕಾರ್ಯದರ್ಶಿ ಕೆ.ಪಿ.ಸಂಜೀವಪ್ಪ ತಿಳಿಸಿದ್ದಾರೆ.

ಧ್ವಜಾರೋಹಣದ ನಂತರ ರೋಟರಿ ವಿದ್ಯಾಸಂಸ್ಥೆಯ ಮುಂಭಾಗದಿಂದ (ಬೆಂಗಳೂರು – ಮೈಸೂರು ಹೆದ್ದಾರಿ ವಾಗರ್ಗವಾಗಿ) ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾ ಅಧಿಕಾರಿಯವರ ಕಚೇರಿ ಆವರಣದವರೆಗೆ ಬೈಕ್ ಮತ್ತು ಸೈಕಲ್ ಜಾಥಾದ ಮೂಲಕ ಜಿಲ್ಲೆಯ ಪ್ರತಿಯೊಬ್ಬ ಅರ್ಹ ಮತದಾರರು ಏಪ್ರಿಲ್ 26ರಂದು ತಪ್ಪದೇ ಮತ ಚಲಾಯಿಸುವಂತೆ ಜಾಗೃತಿ ಮೂಡಿಸಲಾಗುವುದು.

"ನಮ್ಮ ನಡೆ ಮತಗಟ್ಟೆಯ ಕಡೆ" ಎಂಬ ಚುನಾವಣಾ ಧ್ವಜಾರೋಹಣ ಕಾರ್ಯಕ್ರಮವನ್ನು ಏಪ್ರಿಲ್ 21ರಂದು ಬೆಳಿಗ್ಗೆ 8 ಗಂಟೆಗೆ ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿ ರಾಷ್ಟ್ರೀಯ ಹಬ್ಬದ ಮಾದರಿಯಲ್ಲಿ ಮತಗಟ್ಟೆ ಹಂತದಲ್ಲಿ, ಮತಗಟ್ಟೆ ಅಧಿಕಾರಿಗಳ ನೇತೃತ್ವದಲ್ಲಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ನೇತೃತ್ವದಲ್ಲಿ, ಅದೇ ರೀತಿ ಜಿಲ್ಲಾಮಟ್ಟದಲ್ಲಿ ಜಿಲ್ಲಾ ಚುನಾವಣಾ ಅಧಿಕಾರಿಗಳ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿ.ಎಸ್.ಕೇಂದ್ರಕ್ಕೆ ಭೇಟಿ

ಮಂಡ್ಯ : ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಅಗತ್ಯ ಸೇವಾ ವಲಯದಡಿ ಕಾರ್ಯನಿರ್ವಹಿಸುತ್ತಿರುವ 1022 ಸಿಬ್ಬಂದಿಗಳಿಗೆ ಮತದಾನದ ವ್ಯವಸ್ಥೆಯನ್ನು ಮಂಡ್ಯ ವಿಶ್ವವಿದ್ಯಾಲಯದ ಕಲಾ ವಿಭಾಗದಲ್ಲಿ ಪಿ.ಎಸ್. ಕೇಂದ್ರ ತೆರೆದು ನಿರ್ವಹಿಸಲಾಗುತ್ತಿದೆ.

ಅಂಚೆ ಮತದಾನವು ಏ.19, 20 ಹಾಗೂ 21 ರಂದು ನಡೆಯಲಿದ್ದು, ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಆಯುಷ್ ಇಲಾಖೆಯಿಂದ ಚಿಂಚಾ ಪಾನಕ ವಿತರಣೆ ಚಾಲನೆ

ಮನೆ ಮತದಾನ: 85 ಮೇಲ್ಪಟ್ಟವರಿಂದ ಶೇ. 94.90, ವಿಕಲಚೇತನರು ಶೇ.98.42 ಮತದಾನ

ಮಂಡ್ಯ : ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣಾ ಅಂಗವಾಗಿ 85 ವರ್ಷ ಮೇಲ್ಪಟ್ಟ ಮತ್ತು ವಿಕಲಚೇತನರಿಗೆ ಏಪ್ರಿಲ್ 16 ರಿಂದ 18 ರವರೆಗೆ ಮನೆಯಿಂದ ಮತದಾನ ಮಾಡುವ ವ್ಯವಸ್ಥೆ ಮಾಡಲಾಗಿತ್ತು. 12 ಡಿ ಮುಖಾಂತರ 85 ವರ್ಷ ಮತ್ತು ಮೇಲ್ಪಟ್ಟ 2570 ಮತದಾರರು ಹಾಗೂ ವಿಕಲಚೇತನರು 885 ಮತದಾರರು ಮನೆಯಿಂದ ಮತದಾನ ಮಾಡಲು ಒಪ್ಪಿಗೆ ನೀಡಿರುತ್ತಾರೆ. ಇವರ ಪೈಕಿ 85 ವರ್ಷ ಮೇಲ್ಪಟ್ಟ 2439 ಮತದಾರರು ಮತ ಚಲಾಯಿಸಿ ಶೇ. 94.90 ಮತದಾರರು ಮತ ಚಲಾಯಿಸಿರುತ್ತಾರೆ. 885 ವಿಕಲ ಚೇತನರ ಪೈಕಿ 871 ಜನ ಮತ ಚಲಾಯಿಸಿ ಶೇ.98.42 ಮತದಾನವಾಗಿರುತ್ತದೆ. 85 ವರ್ಷ ಮೇಲ್ಪಟ್ಟ ಮತದಾರರಲ್ಲಿ ಕೃಷ್ಣರಾಜ ಪೇಟೆ – 305, ಮದ್ದೂರು – 286, ಮಳವಳ್ಳಿ – 548, ಮಂಡ್ಯ – 220, ಮೇಲುಕೋಟೆ – 334, ನಾಗಮಂಗಲ – 295, ಶ್ರೀರಂಗಪಟ್ಟಣ – 185, ಕೃಷ್ಣರಾಜನಗರ – 266 ಮತದಾರರು ಮತ ಚಲಾಯಿಸಿದ್ದಾರೆ.

■ ಕಾಯಕಯೋಗಿ ಸುದ್ದಿ

ಮಂಡ್ಯ: ಸಾರ್ವತ್ರಿಕ ಲೋಕಸಭಾ ಚುನಾವಣೆಯ ಕೆಲಸಗಳಲ್ಲಿ ನಿರತರಾಗಿರುವ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಬೇಸಿಗೆ ಸಮಯದಲ್ಲಿ ಅನುಕೂಲವಾಗುವಂತೆ ಆಯುಷ್ ಇಲಾಖೆ ವತಿಯಿಂದ ನೀಡಲಾದ ಚಿಂಚಾ ಪಾನಕ ವಿತರಣಾ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಡಾ.ಕುಮಾರ ಇಂದು ಚಾಲನೆ ನೀಡಿ ಮಾತನಾಡಿದರು.

ರಾಜ್ಯಾದ್ಯಂತ ಇತ್ತೀಚಿನ ದಿನಗಳಲ್ಲಿ ತಾಪಮಾನವು ದಾಖಲೆ ಮಟ್ಟದಲ್ಲಿ ಏರಿಕೆಯಾಗುತ್ತಿದ್ದು, ಈ ಬೇಸಿಗೆಯ ಸುಡು ಬಿಸಿಲಿನ ದಿನಗಳಲ್ಲಿ ಸಾರ್ವಜನಿಕರಿಗೆ ಹಾಗೂ ಸಿಬ್ಬಂದಿಗಳಿಗೆ ಆರೋಗ್ಯಕರವಾದ ಚಿಂಚಾ ಪಾನಕದ ಬಗ್ಗೆ ಜಾಗೃತಿ ಮೂಡಿಸಲು ಆಯುಷ್ ಇಲಾಖೆಯು ವತಿಯಿಂದ ಆಯುಷ್ ಪಾನೀಯ ಪರಿಚಯ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಹುಣಸೆಹಣ್ಣು, ಬೆಲ್ಲದ ಪುಡಿ, ಜೀರಿಗೆ ಪುಡಿ, ಕಾಳು ಮೆಣಸಿನ ಪುಡಿ, ಸೈಂದವ ಲವಣಗಳಿಂದ ತಯಾರಿಸಿದ ಚಿಂಚಾ ಪಾನಕವು ಜೀರ್ಣಕ್ರಿಯೆಯನ್ನು ಉತ್ತಮ ಗೊಳಿಸುತ್ತದೆ. ಮಲಬದ್ಧತೆ ನಿವಾರಿಸುವುದು. ಶರೀರದ ದಾಹ ಹಾಗೂ ಬಾಯಾರಿಕೆಯನ್ನು ನೀಗಿಸುತ್ತದೆ ಎಂದರು.

ಅಪರ ಜಿಲ್ಲಾಧಿಕಾರಿ ಡಾ.ಹೆಚ್.ಎಲ್. ನಾಗರಾಜು ಮಾತನಾಡಿ, ಚಿಂಚಾ ಪಾನಕ, ಸೊಗಡೆ ಬೇರಿನ ಪಾನಕ ಸೇರಿದಂತೆ ಆಯುಷ್ ಇಲಾಖೆಯಿಂದ ವಿವಿಧ ರೀತಿಯ ಆರೋಗ್ಯಕರ ವಾದ ಪಾನೀಯವನ್ನು ತಯಾರಿ ಸಲಾಗುತ್ತದೆ. ಏ.20 ರಂದು ತಾಲ್ಲೂಕುವಾರು ನಡೆಯುವ ಎ.ಪಿ.ಆರ್.ಸಿ. ತರಬೇತಿಯಲ್ಲಿ ಭಾಗವಹಿಸುವ ಸಿಬ್ಬಂದಿಗಳಿಗೆ ಚಿಂಚಾ ಪಾನಕವನ್ನು ವಿತರಣೆ ಮಾಡುವಂತೆ ತಿಳಿಸಿದರು.

ಜಿಲ್ಲಾ ಆಯುಷ್ ಅಧಿಕಾರಿ ಡಾ.ಸೀತಾಲಕ್ಷ್ಮಿ ಬಿ.ಎಸ್ ಮಾತನಾಡಿ, ಹುಣಸೆ



ಹಣ್ಣನ್ನು ಅಗತ್ಯ ಪ್ರಮಾಣದ ನೀರಿನಲ್ಲಿ ಇಡೀ ರಾತ್ರಿ ನೆನೆಸಿಟ್ಟು ಮರುದಿನ ಬೆಳಿಗ್ಗೆ ಅದನ್ನು ಶುದ್ಧವಾದ ಕೈಗಳಿಂದ ಚೆನ್ನಾಗಿ ಹಿಸುಕಿ ಬಳಸಿ). ಅಗತ್ಯ ಪ್ರಮಾಣದಷ್ಟು ನೀರನ್ನು ಪಾತ್ರೆಗೆ ಹಾಕಿಕೊಳ್ಳಿ, ಅಗತ್ಯ ಪ್ರಮಾಣದಷ್ಟು ಹುಣಸೆ ಹಣ್ಣಿನ ಮಿಶ್ರಣವನ್ನು ನೀರಿನ ಪಾತ್ರೆಗೆ ಹಾಕಿದ ನಂತರ ಬೆಲ್ಲದ ಪುಡಿಯನ್ನು ನೀರಿನಲ್ಲಿ ಹಾಕಿ ಚೆನ್ನಾಗಿ ಕರಗಿಸಿ ಜೀರಿಗೆ ಪುಡಿ, ಕಾಳು ಮೆಣಸಿನ ಪುಡಿ, ಸೈಂದವ ಲವಣವನ್ನು ಸೇರಿಸಬೇಕು ಎಂದರು.

ಚಿಂಚಾ ಪಾನಕವನ್ನು ತಯಾರಿಸುವಾಗ ಹುಣಸೆಹಣ್ಣು 100 ಗ್ರಾಂ, ಬೆಲ್ಲದ ಪುಡಿ 400 ಮಿಲಿ, ಜೀರಿಗೆ ಪುಡಿ 10 ಗ್ರಾಂ, ಕಾಳು ಮೆಣಸಿನಪುಡಿ 5 ಗ್ರಾಂ, ಸೈಂದವ ಲವಣ 5 ಗ್ರಾಂ ಹಾಕಬೇಕು. 50 ರಿಂದ 100 ಮಿಲಿ ಸೇವನೆ ಮಾಡುವುದು ಉತ್ತಮ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿ.ಪಂ. ಸಿಇಓ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಆಯುಷ್ ಇಲಾಖೆಯ ಡಾ.ಮಧುಮಾಲತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಏ.26ರಂದು ಮತಗಟ್ಟೆಗಳ ಸುತ್ತ ನಿಷೇಧಾಜ್ಞೆ ಜಾರಿ

ಮಂಡ್ಯ : ಲೋಕಸಭಾ ಸಾರ್ವತ್ರಿಕ ಚುನಾವಣೆ– 2024ರ ಸಂಬಂಧ ಮಂಡ್ಯ ಲೋಕಸಭಾ ಕ್ಷೇತ್ರದಲ್ಲಿ ಮತದಾನವು ಏ.26ರಂದು ಬೆಳಿಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಡೆಯಲಿದೆ.

ಮತದಾನದ ದಿನವಾದ ಏ.26ರಂದು ಬೆಳಿಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿನ ಎಲ್ಲಾ ಮತಗಟ್ಟೆಗಳ ವ್ಯಾಪ್ತಿಯಲ್ಲಿ ಷರತ್ತುಗಳನ್ನು ವಿಧಿಸಿ ನಿಷೇದಾಜ್ಞೆ ಜಾರಿ ಮಾಡಿ ಜಿಲ್ಲಾಧಿಕಾರಿ ಡಾ.ಕುಮಾರ ಆದೇಶ ಹೊರಡಿಸಿದ್ದಾರೆ.

ಈ ಆವಧಿಯಲ್ಲಿ ಚುನಾವಣಾ ಕರ್ತವ್ಯ ನಿರತ ಅಧಿಕಾರಿ ಸಿಬ್ಬಂದಿಗಳ ವಾಹನಗಳನ್ನು ಹೊರತುಪಡಿಸಿ ಇತರೆ ಯಾವುದೇ ವಾಹನಗಳು ನಿಷೇಧಿತ ಪ್ರದೇಶದೊಳಗಿನ 200 ಮೀಟರ್ ವ್ಯಾಪ್ತಿಯಲ್ಲಿ ಪ್ರವೇಶಿಸುವಂತಿಲ್ಲ. ಆದರೆ ಈ ಆದೇಶವು ತುರ್ತು ಸೇವೆಗಳನ್ನು ಒದಗಿಸುವ ವಾಹನಗಳಿಗೆ (ಅಸ್ತ್ರೆ ವಾಹನಗಳು, ಆಂಬುಲೆನ್ಸ್, ಹಾಲಿನ ವಾಹನ, ನೀರಿನ ಟ್ಯಾಂಕರ್, ವಿದ್ಯುತ್ ವಾಹನಗಳು) ಅನ್ವಯಿಸುವುದಿಲ್ಲ.ಮತಗಟ್ಟೆಗಳ ವ್ಯಾಪ್ತಿಯ 100 ಮೀಟರ್ ಪ್ರದೇಶದೊಳಗೆ ಯಾವುದೇ ಚುನಾವಣಾ ಪ್ರಚಾರವನ್ನು ಮಾಡುವಂತಿಲ್ಲ.

ಚುನಾವಣಾ ಕರ್ತವ್ಯ ನಿರತ ಅಧಿಕಾರಿ ಸಿಬ್ಬಂದಿಗಳನ್ನು ಹೊರತುಪಡಿಸಿ ಇತರೆ ಯಾವುದೇ ವ್ಯಕ್ತಿಗಳು ಮೊಬೈಲ್, ತಂತಿ ರಹಿತ (Cordless) ಹಾಗೂ ಇತರೆ ದೂರವಾಣಿ ಸಾಧನಗಳನ್ನು ಮತಗಟ್ಟೆಗಳ ವ್ಯಾಪ್ತಿಯ 100 ಮೀಟರ್ ಪ್ರದೇಶದೊಳಗೆ ತರುವಂತಿಲ್ಲ. ಮತಗಟ್ಟೆಗಳ ವ್ಯಾಪ್ತಿಯ ನೂರು ಮೀಟರ್ ಪ್ರದೇಶದೊಳಗೆ ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದ ಯಾವುದೇ ಪೋಸ್ಟರ್ ಹಾಗೂ ಬ್ಯಾನರ್ ಗಳನ್ನು ಹಾಕುವಂತಿಲ್ಲ. ಮತದಾನದ ದಿನದಂದು ಮತಗಟ್ಟೆಯ 100 ಮೀಟರ್ ವ್ಯಾಪ್ತಿಯಲ್ಲಿ ಧ್ವನಿವರ್ಧಕ ಮೆಗಾ ಫೋನ್ ಇತ್ಯಾದಿ ಹಾಗೂ ಅನುಚಿತವಾಗಿ ವರ್ತಿಸುವುದನ್ನು ನಿರ್ಬಂಧಿಸಲಾಗಿದೆ. ಈ ಆದೇಶವನ್ನು ಮಂಡ್ಯ ಪೊಲೀಸ್ ಅಧಿಕ್ಷಕರು ಮತ್ತು ತಾಲೂಕು ಕಾರ್ಯನಿರ್ವಾಹಕ ದಂಡಾಧಿಕಾರಿಗಳು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು. ಆದೇಶ ಉಲ್ಲಂಘಿಸುವವರ ವಿರುದ್ಧ ಕಲಂ 188 ರನ್ವಯ ಕಾನೂನಿನ ಅನ್ವಯ ಕ್ರಮ ಕೈಗೊಳ್ಳಲಾಗುವುದು ಎಂದು ಮಂಡ್ಯ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ. ಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈತ್ರಿ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ: ಅಶೋಕ್

■ ಕಾಯಕಯೋಗಿ ಸುದ್ದಿ

ಪಾಂಡವಪುರ: ಆರ್ಥಿಕವಾಗಿ ದಿವಾಳಿಯತ್ತ ಸಾಗುತ್ತಿದ್ದ ದೇಶದ ಆರ್ಥಿಕತೆಗೆ ಶಕ್ತಿ ತುಂಬಿ ವಿಶ್ವವೇ ಭಾರತವನ್ನು ದಿಟ್ಟಿಸಿ ನೋಡುವಂತಹ ಆಡಳಿತ ನೀಡಿದ ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ಮಂಡ್ಯ ಸೇರಿದಂತೆ ರಾಜ್ಯದ 28 ಕ್ಷೇತ್ರಗಳಲ್ಲೂ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ಜಿಪಂ ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಅಶೋಕ್ ಹೇಳಿದರು.



ತಾಲೂಕಿನ ಮೊಳ್ಳೇನಹಳ್ಳಿ, ಅಂಕೇಗೌಡನ ಕೊಪ್ಪಲು, ಕನಗನಹಳ್ಳಿ, ಅಕ್ಕೋಕನಗರ, ಕೆ.ಮಂಚನಹಳ್ಳಿ, ಸಣಬದಕೊಪ್ಪಲು, ಇಳ್ಳೇನಹಳ್ಳಿ, ಬೋರೇಗೌಡನಕೊಪ್ಪಲು, ಸಣಬು, ತಿರುಮಲಪುರ, ಹಸನ್‌ಪುರ, ಚಿಕ್ಕಬೋಗನ ಹಳ್ಳಿ, ಬ್ಯಾಡರಾಯನಪುರ, ದೊಡ್ಡಬೋಗನ ಹಳ್ಳಿ, ಲಿಂಗಾಪುರ, ಮೊರಸನಹಳ್ಳಿ ಹಾಗೂ ಕಾಳೇಗೌಡನಕೊಪ್ಪಲು ಗ್ರಾಮಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಕೂಟದ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರ ಪರವಾಗಿ ಶುಕ್ರವಾರ ಮತಯಾಚನೆ ಮಾಡಿದ ಬಳಿಕ ಮಾತನಾಡಿದರು. ಕೇವಲ 10 ವರ್ಷದ ಆಡಳಿತಾವಧಿಯಲ್ಲಿ ಭಾರತವನ್ನು ವಿಶ್ವಗುರು ವನ್ನಾಗಿದ್ದಾರೆ. ಇನ್ನುಳಿದ ಐದು ವರ್ಷದಲ್ಲಿ ದೇಶದ ಆರ್ಥಿಕತೆ ಸಮಗ್ರ ಅಭಿವೃದ್ಧಿ ಕಂಡು ವಿಶ್ವದ ಆರ್ಥಿಕತೆಯಲ್ಲಿ ಭಾರತ ಮೊದಲ ಸ್ಥಾನದಲ್ಲಿರುತ್ತದೆ. ಮೋದಿ ಅವರು ಕೈ ಬಲಪಡಿಸಲು ಎಚ್.ಡಿ.ಕುಮಾರಸ್ವಾಮಿ ಅವರನ್ನು ಬಹುಮತಗಳ ಅಂತರದಲ್ಲಿ ಗೆಲ್ಲಿಸಿ ಸಂಸತ್‌ಗೆ ಕಳುಹಿಸಬೇಕು ಎಂದರು.

ಎರಡು ಬಾರಿ ಮುಖ್ಯಮಂತ್ರಿಯಾಗಿದ್ದ ಎಚ್.ಡಿ.ಕುಮಾರಸ್ವಾಮಿ ಅವರು ಮಂಡ್ಯ ಜಿಲ್ಲೆಯನ್ನು ಪ್ರತಿನಿಧಿಸಿ ಕೇಂದ್ರ ಸರ್ಕಾರದಲ್ಲಿ ಮಂತ್ರಿಯಾಗುತ್ತಿರುವುದು ನಮ್ಮೆಲ್ಲರಿಗೂ ಸಂತೋಷದ ವಿಷಯ. ಮೋದಿ ಅವರ ಸಂಪುಟದಲ್ಲಿ ಎಚ್‌ಡಿಕೆ ಮಂತ್ರಿಯಾಗುತ್ತಾರೆ ಎಂದರೆ ಅದಕ್ಕಿಂತ ದೊಡ್ಡ ವಿಚಾರ ಬೇರೆ ಏನಿದೆ. ಪಾಕಿಸ್ತಾನ ಸೇರಿದಂತೆ ನೆರೆ ರಾಷ್ಟ್ರಗಳು ನೀಡುತ್ತಿದ್ದ ಕಿರುಕುಳಕ್ಕೆ ಮೋದಿ ಕಡಿವಾಣ ಹಾಕಿದ್ದಾರೆ. ನಮ್ಮ ದೇಶದ ಸೈನಿಕ ಅಭಿನಂದನ್ ಬಂಧಿಸಿದ್ದ ಪಾಕಿಸ್ತಾನಕ್ಕೆ ಪ್ರಪಂಚದದ ಛೂಬಾಟದಲ್ಲಿ ಪಾಕಿಸ್ತಾನ ಇಲ್ಲದಂತೆ ಮಾಡುವುದಾಗಿ ಎಚ್ಚರಿಕೆ ನೀಡಿದ ಪ್ರಧಾನಿ ಅವರ ಒಂದೇ ಒಂದು ಖಡಕ್ ಸಂದೇಶಕ್ಕೆ ಕೇವಲ 24 ಗಂಟೆಯೊಳಗೆ ಪಾಕಿಸ್ತಾನ ಸೈನಿಕನ್ನು ಬಿಡುಗಡೆಗೊಳಿಸಿ ಶರಣಾಯಿತು. ಇಂಥ ಗಂಡಾಡೆಯ ಪ್ರಧಾನಿ ನಮ್ಮ ದೇಶಕ್ಕೆ ಬೇಕು ಎಂದು ತಿಳಿಸಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಮೂರು ಬಾರಿ ಶಾಸಕರಾಗಿ, ಸಚಿವರಾಗಿ ಹಾಗೂ ಒಮ್ಮೆ ಸಂಸದರಾಗಿ ಉತ್ತಮ ಕೆಲಸ ಕಾರ್ಯ ಮಾಡಿದ್ದಾರೆ. ಅವರ ನೇತೃತ್ವದಲ್ಲಿ ಮೇಲುಕೋಟೆ ವಿಧಾನಸಭಾ ಕ್ಷೇತ್ರ ಸೇರಿದಂತೆ ಲೋಕಸಭಾ ಕ್ಷೇತ್ರದ ಎಲ್ಲಾ ತಾಲೂಕುಗಳಲ್ಲಿಯೂ ಮೈತ್ರಿಕೂಟದ ಅಭ್ಯರ್ಥಿಗೆ ಕುಮಾರಸ್ವಾಮಿ ಅವರು ಭಾರಿ ಮತಗಳ ಅಂತರದಲ್ಲಿ ಗೆಲುವು ಸಾಧಿಸಲಿದ್ದಾರೆ. ಕುಮಾರಸ್ವಾಮಿ ಅವರ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಮಹಿಳ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡಿ ಹಲವು ಕಾರ್ಯಕ್ರಮಗಳನ್ನು ರೂಪಿಸಿದ್ದರು. ಅದೇ ರೀತಿ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ನಷ್ಟವಾದರೂ ಸರಿಯೇ ಬಡ ಕುಟುಂಬಗಳು ಬೀದಿಗೆ ಬರಬಾರದು ಎಂಬ ದೃಷ್ಟಿಯಿಂದ ಆಲಾರಿ, ಸಾರಾಯಿ ನಿಷೇಧಿಸುವ ಮೂಲಕ ಬಡವರ ಪರ ಕಾಳಜಿ ವ್ಯಕ್ತಪಡಿಸಿದ್ದರು ಎಂದರು.

ಈ ವೇಳೆ ತಾಪಂ ಮಾಜಿ ಸದಸ್ಯ ಗೋಪಾಲೇಗೌಡ, ಎಪಿಎಂಸಿ ಮಾಲೀಕರ ಸಂಘದ ಅಧ್ಯಕ್ಷ ಸಿ.ಶಿವಕುಮಾರ್, ಮೈಷ ಮಹದೇವ, ಗ್ರಾಪಂ ಸದಸ್ಯ ಸಿ.ಎಸ್.ಲೋಕೇಶ್, ಕಾಳೇಗೌಡನಕೊಪ್ಪಲು ಶಿವಕುಮಾರ್, ಚನ್ನಕೃಷ್ಣ ಇತರರು ಇದ್ದರು.

ಮಂಟೇಸ್ವಾಮಿ ಜಾತ್ರಾ ಮಹೋತ್ಸವ: ಪಂಕ್ತಿ ಸೇವೆ

■ ಕಾಯಕಯೋಗಿ ಸುದ್ದಿ

ಬೆಳಕವಾಡಿ: ತಾಲೂಕಿನ ಇತಿಹಾಸ ಪ್ರಸಿದ್ಧ ಬಿಜೆಪುರದ ಶ್ರೀ.ಮಂಟೇಸ್ವಾಮಿ ಜಾತ್ರಾಮಹೋತ್ಸವದ ಅಂಗವಾಗಿನಡೆಯುವ ಐದು ಪಂಕ್ತಿಸೇವೆಗಳಲ್ಲಿ ಪ್ರಮುಖವಾದ ಹಾಗೂ ಸಾರಪಂಕ್ತಿಸೇವೆಶುಕ್ರವಾರ ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿದ ಭಕ್ತರು ಶ್ರೀ.ಮಂಟೇಸ್ವಾಮಿ ಅವರ ಗದ್ದುಗೆ ದರ್ಶನ ಪಡೆದರು.

ಶುಕ್ರವಾರ ಬೆಳಿಗ್ಗೆಯಿಂದಲೇ ಮಠದ ಆವರಣದಲ್ಲಿ ನಡೆದ ಸಾರಪಂಕ್ತಿ ಸೇವೆಯಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ದೂವಾದಸೇವೆ, ದೀಪದಸೇವೆ, ಕಡ್ಡಿಪೂರ ದಿಂದ ಪ್ರಜಸೇವೆಯಲ್ಲಿ ಜೊತೆಗೆ ಭಕ್ತರು ಶ್ರೀ ಮಂಟೇಸ್ವಾಮಿ ಅವರ ಗದ್ದುಗೆದರ್ಶನ ಪಡೆದು ಜೊತೆಯಲ್ಲಿ ತಂದಿದ್ದ ಬಾಳೆಹಣ್ಣು ಸಕ್ಕರೆಯನ್ನು ಮಿಶ್ರಣಮಾಡಿ ನೈವೇದ್ಯ ಮಾಡಿ ಮಠಕ್ಕೆ ನೀಡಿದ ಬಳಿಕ ಭಕ್ತರು ಸೇವಿಸಿದರು.



ಮಂಟೇಸ್ವಾಮಿ ಮಠದ ಪೀಠಾಧಿಕಾರಿ ಗಳಾದ ಶ್ರೀ.ಜ್ಞಾನಸಂದ ಚೆನ್ನರಾಜೇ ಅರಸ್‌ರವರು ಆಗಮಿಸಿ ಭಕ್ತರಿಗೆ ಆರ್ಶೀವಾದ ಮಾಡಿ ಬಳಿಕ ಮಾತನಾಡಿ ಶ್ರೀ ಮಂಟೇಸ್ವಾಮಿ ಜಾತ್ರಾಮಹೋತ್ಸವದ ನಂತರ ನಾಲ್ಕು ಸಾರಪಂಕ್ತಿಸೇವೆ ನಡೆಯಲಿದ್ದು ಸೋಮವಾರ ಬೆಳ್ಳಗೆಕೊರೆಯ ಫಲಹಾರ ಪಂಕ್ತಿಸೇವೆ ನಡೆಯುತ್ತದೆ ಎಂದು ತಿಳಿಸಿದರು, ಬಸವಣ್ಣನವರ ಕಲ್ಯಾಣಗರಿಯಲ್ಲಿ ಎಲ್ಲಾ ಭಕ್ತರಿಗೆಪ್ರಸಾದ ಏನಿಯೋಗ ನಡೆಸುವ ಪಂಕ್ತಿಸೇವೆ ನಡೆದ ನಂತರ ಕೊರೆಯದಾಗಿ ಶರಣರು ಲೋಕಕಲ್ಯಾಣಕ್ಕಾಗಿ ವಚನಗಳನ್ನು ಸಾರಿ ನಂತರ ಪ್ರಸಾದ ಸೇವಿಸುತ್ತಿದ್ದ ಈ ಸಾರ ಪಂಕ್ತಿಸೇವೆ ಸಂಪ್ರದಾಯದ ಭಾಗವಾಗಿ ಈಮಠದಲ್ಲಿ ಸಹ ಸಾರಪಂಕ್ತಿಸೇವೆ ನಡೆಸಿಕೊಂಡು ಬರಲಾಗುತ್ತಿದೆ ಹಾಗೂ ಗುರುವಾರ ರಾತ್ರಿ ಸ್ವಲ್ಪ ಪ್ರಮಾಣದಲ್ಲಿ ಮಳೆಯಾಗಿದ್ದು ಮುಂದಿನದಿನಗಳಲ್ಲಿ ಹೆಚ್ಚು ಮಳೆಯಾಗಿ ಜನಜಾನುವಾರುಗಳಿಗೆ ನೀರುಆಗಿ ರೈತರು ಹೆಚ್ಚು ಬೆಳೆಗಳನ್ನು ಬೆಳೆಯಲಿ ಎಂದು ಆಶಯಿಸಿದರು.

ಇದೇಸಂದರ್ಭದಲ್ಲಿ ಮಠದ ವತಿಯಿಂದ ಶ್ರೀ.ಭರತ್‌ರಾಜೇಅರಸ್‌ಅವರು ಶುಕ್ರವಾರ ಸಾರಪಂಕ್ತಿ ಸೇವೆಗೆ ಆಗಮಿಸಿ ಸಾವಿರಾರು ಭಕ್ತರಿಗೆ ಊಟದವ್ಯವಸ್ಥೆ ಹಾಗೂ ನೀರಿನವ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-3 | 20-04-2024

ಮೈಸೂರು

ಬಿಜೆಪಿಯ ವಿರುದ್ಧ ಸಮರ ಸಾರಿ, ಕಾಂಗ್ರೆಸ್ ಬೆಂಬಲಿಸಿದ ದಸಂಸ

■ ಕಾಯಕಯೋಗಿ ಸುದ್ದಿ

ನಂಜನಗೂಡು: ಸಂವಿಧಾನ, ಪ್ರಜಾ ಪ್ರಭುತ್ವ, ಒಕ್ಕೂಟ ಭಾರತ ಉಳಿಸಿಕೊಳ್ಳಲು ನಮಗಿರುವ ಕೊನೆಯ ಅವಕಾಶವೆಂದರೆ ಲೋಕಸಭಾ ಚುನಾವಣೆಯಲ್ಲಿ ನಾವು ನಮ್ಮ ಶಕ್ತಿಯನ್ನು ತೋರಿಸಬೇಕಿದೆ ಎಂದು ದಲಿತ ಸಂಘರ್ಷ ಸಮಿತಿಗಳ ಐಕ್ಯ ಚಾಲನ ಸಮಿತಿಯ ರಾಜ್ಯ ಸಂಚಾಲಕ ಇಂದೂ ಧರ್ ಹೊನ್ನಪುರ ಹೇಳಿದರು.

ನಂಜನಗೂಡು ತಾಲ್ಲೂಕಿನ ಕಳಲೆ ಗ್ರಾಮದಲ್ಲಿ ದಲಿತ ಸಂಘರ್ಷ ಸಮಿತಿಗಳ ಐಕ್ಯ ಹೋರಾಟ ಚಾಲನಾ ಸಮಿತಿಯಿಂದ ರಾಜಕೀಯ ಜನ ಜಾಗೃತಿ ದಸಂಸ ಅಂಬೇಲಕ್ಕೆ ಚಾಲನೆ ನೀಡಿ ಕರಪತ್ರಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಅವರು, ಲೋಕಭಾ ಚುನಾವಣೆ ಬಹಳ ಮಹತ್ವವಾಗಿದೆ. ಪ್ರಸ್ತುತ ಸಂದರ್ಭದಲ್ಲಿ ನಾವು ಸಂವಿಧಾನವನ್ನು ಉಳಿಸಿಕೊಳ್ಳಬೇಕಾಗಿದೆ. ಭಾರತ ದೇಶದಲ್ಲಿ ಪ್ರಜಾ ಪ್ರಭುತ್ವ ಅಪಾಯದಲ್ಲಿದೆ ಎಂದು ವಿದೇಶಿ ಸಂಸ್ಥೆಗಳು ಹೇಳುತ್ತಿವೆ. ಭಾರತವು ಸರ್ವಾಧಿಕಾರಿ ಆಡಳಿತಕ್ಕೆ ಹೋಗುತ್ತಿದೆ. ಬಿಜೆಪಿಯ ನೇತೃತ್ವದ ಸರ್ಕಾರವು ಬಂಡವಾಳ ಶಾಹಿಗಳನ್ನು ಬೆಂಬಲಿಸಿ ಬಡವರನ್ನು ಮೂಲೆಗುಂಪು ಮಾಡುತ್ತಿದೆ. ಸಂವಿಧಾನವನ್ನು ಬದಲಾಯಿಸುತ್ತೇವೆ ಎಂದು ಹೇಳಿಕೆ ನೀಡಿದ ಪಕ್ಷವನ್ನು ನಾವು ಬದಲಾಯಿಸಬೇಕು. ಇನ್ನು ಮುಂದೆ ಚುನಾವಣೆ ನಡೆಯುತ್ತದೆ ಎಂಬುದು ನವಂಗೆ ಗ್ಯಾರಂಟಿ ಇಲ್ಲ. ಸಂವಿಧಾನದ ವಿರೋಧಿ ಬಿಜೆಪಿ ಪಕ್ಷದ ಬಗ್ಗೆ



ನಾವು ಎಚ್ಚರಿಕೆ ವಹಿಸಬೇಕು. ಬಿಜೆಪಿ ಸರ್ಕಾರ ಮುಂದುವರೆದರೆ ಸಂವಿಧಾನವನ್ನು ಬದಲಾಯಿಸುತ್ತಾರೆ. ಸಂವಿಧಾನ ವಿರೋಧಿ ಪಕ್ಷವನ್ನು ನಾವು ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಸೋಲಿಸಲೇಬೇಕು. ಈ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷವನ್ನು ನಾವು ಬೆಂಬಲಿಸಬೇಕಾಗಿದೆ. ಕಾಂಗ್ರೆಸ್ ಪಕ್ಷವು ಬಡವರ ಹಿಂದುಳಿದವರ ಅಲ್ಪಸಂಖ್ಯಾತರ ಮತ್ತು ಮಹಿಳೆಯರ ಪರವಾಗಿದೆ. ಸಂಘಟನೆಯ ಪದಾಧಿಕಾರಿಗಳು ಜನರಿಗೆ ಬಿಜೆಪಿ ಸರ್ಕಾರದ ಬಗ್ಗೆ ತಿಳಿಸಿ ಜನಸ್ನೇಹಿ ಜಾಗೃತಿಗೊಳಿಸಿ ಈ ಬಾರಿ ಬಿಜೆಪಿಯನ್ನು ಸೋಲಿಸಲು ಮತಕೊಡಿಸಬೇಕು ಎಂದು ಕರೆ ನೀಡಿದ್ದಾರೆ ಈ ಸಂದರ್ಭದಲ್ಲಿ ಕೆರೆಗೂಡು ಗುರುಸ್ವಾಮಿ, ವಿನಾಗರಾಜು, ಗುರುಪ್ರಸಾದ್, ಜೀವನಹಳ್ಳಿ ವೆಂಕಟೇಶ್, ದೇವಗಳ್ಳಿ ಸೋಮಶೇಖರ್, ಜಿಲ್ಲಾ ಸಂಯೋಜಕ ಕಾರ್ಯ ಬಸವಣ್ಣ ಆಲಗೂಡು ಶಿವಕುಮಾರ್, ಮಳ್ಳುಪ್ಪಳ್ಳಿ ನಾರಾಯಣ್, ಕಳಲೆ ಕುಮಾರ್, ಮಂಜು ಶಂಕರಪುರ, ಮಹೇಶ್ ಗೆಟ್ಟವಾಡಿ, ಜಯಶಂಕರ್, ಸಿದ್ದರಾಜು ಭಾಗವಹಿಸಿದ್ದರು.

ನಂಜನಗೂಡಿನಲ್ಲಿ ಜಾತಿ ಗಣತಿ ವರದಿ ಪ್ರಸ್ತಾಪ ಮಾಡಿದ ಡಾ.ಯತೀಂದ್ರ ಸಿದ್ದರಾಮಯ್ಯ

ಹಿಂದುಳಿದ ವರ್ಗಗಳ ಚುನಾವಣಾ ಪ್ರಚಾರ ಕಾರ್ಯಕ್ರಮದಲ್ಲಿ ಹೇಳಿಕೆ

ನಂಜನಗೂಡು : ನಂಜನಗೂಡು ಪಟ್ಟಣದ ಮಹದೇಶ್ವರ ಯಾತ್ರಿ ಭವನದಲ್ಲಿ ನಂಜನಗೂಡು ವಿಧಾನಸಭಾ ಕ್ಷೇತ್ರದ ಹಿಂದುಳಿದ ವರ್ಗಗಳ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಪುತ್ರ ಮಾಜಿ ಶಾಸಕ ಹಾಗೂ ಆಶ್ರಯ ಸಮಿತಿ ಅಧ್ಯಕ್ಷ ಡಾ.ಯತೀಂದ್ರ ಸಿದ್ದರಾಮಯ್ಯ ಚಾಮರಾಜ ನಗರ ಲೋಕಸಭಾ ಕ್ಷೇತ್ರದ ಚುನಾವಣೆಯ ಪ್ರಚಾರ ಸಭೆಯಲ್ಲಿ ಮಾತನಾಡಿ, ದೇಶದಲ್ಲಿ ಜನ ಸಂಖ್ಯೆ ಅನುಗುಣವಾಗಿ ಮೀಸಲಾತಿ ಇಲ್ಲ ಮೀಸಲಾತಿ ವಿರುದ್ಧ ಆರ್ ಎಸ್ ಎಸ್ ನವರು ಪ್ರತಿಭಟಿಸಿದ್ದರು.

ಬಿಜೆಪಿ ಮತ್ತು ಆರ್ ಎಸ್ ಎಸ್ ಮೀಸಲಾತಿಯನ್ನು ವಿರೋಧಿಸುತ್ತಾ ಬಂದಿವೆ. ಸಣ್ಣಪುಟ್ಟ ಜಾತಿಗಳನ್ನು ಗುರುತಿಸಬೇಕು. ಸಿದ್ದರಾಮಯ್ಯ ನೇತೃತ್ವದಲ್ಲಿ ಜಾತಿ ಗಣತಿ ವರದಿಯನ್ನು ಪ್ರಕಟ ಮಾಡಲಾಗುತ್ತದೆ. ಜಾತಿ ಗಣತಿ ಆಧಾರವಾಗಿರುತ್ತದೆ ಜಾರಿಗೆ ತರಬೇಕು. ಬಿಜೆಪಿಯವರು ಹಿಂದುಳಿದವರ ಪರವಾಗಿ ದಲಿತರ ಪರವಾಗಿ ಯಾವತ್ತೂ ಕೆಲಸ ಮಾಡುವುದಿಲ್ಲ. ಎಲ್ಲರ ಪರವಾಗಿ ಕಾಂಗ್ರೆಸ್ ಪಕ್ಷವಿದೆ. ಕಾಂಗ್ರೆಸ್ ಪಕ್ಷವನ್ನು ಈ ಬಾರಿ ಚುನಾವಣೆಯಲ್ಲಿ ಬೆಂಬಲಿಸಿ, ಸಾಮಾಜಿಕ ಸಿದ್ಧಾಂತದ ಅಡಿಯಲ್ಲಿ ಕಾಂಗ್ರೆಸ್ ಪಕ್ಷದ ಕೆಲಸ ಮಾಡಿಕೊಂಡು ಬಂದಿದೆ. ಬಿಜೆಪಿಯವರು ಸಂವಿಧಾನವನ್ನು ಬದಲಾವಣೆ ಮಾಡುತ್ತಿವೆ ಎಂದು ಹೇಳುತ್ತಿದ್ದಾರೆ ನಾವು ಅವರನ್ನೇ ಬದಲಾಯಿಸಬೇಕು. ಈ ಬಾರಿ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಸುನಿಲ್ ಬೋಸ್ ಅವರನ್ನು ಗೆಲ್ಲಿಸಬೇಕು ಎಂದು ಕರೆ ನೀಡಿದರು.

ಸಭೆಯಲ್ಲಿ ನಂಜನಗೂಡಿನ ಶಾಸಕ ದರ್ಶನ್ ಧ್ರುವನಾರಾಯಣ್ ಉಸ್ತುವಾರಿ ಶ್ರೀಕಂಠ, ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ವಿಧಾನ ಪರಿಷತ್ ಸದಸ್ಯ ವೇಣುಗೋಪಾಲ್, ಕಾಂಗ್ರೆಸ್ ಪಕ್ಷದ ಮುಖಂಡರಾದ ಇಂದ್ರನ್ ಬಾಬು, ಗಿರೀಶ್, ನಂದಕುಮಾರ್, ಕೆ.ಮಾರುತಿ ಬ್ಲಾಕ್ ಅಧ್ಯಕ್ಷರಾದ ಕುರಹಟ್ಟಿ ಮಹೇಶ್, ಶ್ರೀಕಂಠ ನಾಯಕ, ಶಂಕರ್ ಸೇರಿದಂತೆ ಹಲವರು ಭಾಗವಹಿಸಿದ್ದರು.


ಇಂದು ಚಿಣ್ಣರಮೇಳದ ಮಕ್ಕಳಿಗೆ ಅಗ್ನಿಶಾಮಕದ ಪ್ರಾತ್ಯಕ್ಷಿಕೆ

ಮೈಸೂರು: ರಂಗಾಯಣವು ಚಿಣ್ಣರಮೇಳ-2024 ರ ಮಕ್ಕಳ ರಂಗ ತರಬೇತಿ ಶಿಬಿರವನ್ನು ಏ.12 ರಿಂದ ನಡೆಸುತ್ತಿದ್ದು, ಈ ಮೇಳದಲ್ಲಿ ಏ.20 ರಂದು ಮಧ್ಯಾಹ್ನ 4.30 ಗಂಟೆಗೆ ಅಗ್ನಿಶಾಮಕ ದಳದವರು ಚಿಣ್ಣರಮೇಳದ ಮಕ್ಕಳಿಗೆ ಅಗ್ನಿಶಾಮಕದ ಬಗ್ಗೆ ಮಾಹಿತಿ ಹಾಗೂ ಪ್ರಾತ್ಯಕ್ಷಿಕೆಯನ್ನು ನೀಡಲಿದ್ದಾರೆ ಎಂದು ರಂಗಾಯಣದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಏ.26 ರಂದು ಮಹಾವೀರ ಜಯಂತಿ ಆಚರಣೆ

ಮೈಸೂರು: ಲೋಕಸಭೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಏ.21 ರಂದು ಭಗವಾನ್ ಮಹಾವೀರ ಜಯಂತಿಯನ್ನು ಕರ್ನಾಟಕ ಕಲಾಮಂದಿರದ ಆವರಣದಲ್ಲಿರುವ ಸುಚಿತ್ರ ಗ್ಯಾಲರಿಯಲ್ಲಿ ಬೆಳಿಗೆ 10.30 ಗಂಟೆಗೆ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಎಂ.ಡಿ. ಸುದರ್ಶನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಜೆಪಿ ಪಕ್ಷದ ಮುಖಂಡರಿಂದ ಭರ್ಜರಿ ಮತಯಾಚನೆ



■ ಕಾಯಕಯೋಗಿ ಸುದ್ದಿ

ನಂಜನಗೂಡು: ಚಾಮರಾಜನಗರ ಲೋಕಸಭಾ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ನಂಜನಗೂಡು ತಾಲ್ಲೂಕಿನ ಶ್ರೀ ಕ್ಷೇತ್ರ ದೇವನೂರು ಗ್ರಾಮದ ಶ್ರೀ ಗುರು ಮಲ್ಲೇಶ್ವರ ದಾಸೋಹ ಮಠದಲ್ಲಿ ಪೂಜೆ ಸಲ್ಲಿಸಿದ ಬಳಿಕ ಬಿಜೆಪಿ ಅಭ್ಯರ್ಥಿ ಎಸ್ ಬಾಲರಾಜು ಪರವಾಗಿ ಬಿಜೆಪಿ ಮುಖಂಡರು ಭರ್ಜರಿ ಮತಯಾಚನೆ ನಡೆಸಿದ್ದಾರೆ.

ಬಿಜೆಪಿ ಹಿರಿಯ ಮುಖಂಡ ಕುಂಬ್ರಹಳ್ಳಿ ಸುಬ್ಬಣ್ಣ ಮಾತನಾಡಿ, ಬಿಜೆಪಿ ಅಭ್ಯರ್ಥಿ ಎಸ್. ಬಾಲರಾಜು ರವರ ಪರವಾಗಿ ಶ್ರೀ ಕ್ಷೇತ್ರ ದೇವನೂರು ಮಠದಲ್ಲಿ ಪೂಜೆ ಸಲ್ಲಿಸಿ, ಶ್ರೀಗಳ ಆಶೀರ್ವಾದ ಪಡೆದು ದೇವನೂರು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಮಾತಯಾಚನೆ ಮಾಡಿದ್ದೇವೆ. ಈ ಬಾರಿ ಚುನಾವಣೆಯಲ್ಲಿ ಬಾಲರಾಜುರವರ ಗೆಲುವಿಗೆ ಕಾರ್ಯಕರ್ತರು ಶ್ರಮಿಸಬೇಕು. ಚಾಮರಾಜನಗರವನ್ನು ಮತ್ತಷ್ಟು ಅಭಿವೃದ್ಧಿಪಡಿಸಲು ಬಿಜೆಪಿಯನ್ನು ಬೆಂಬಲಿಸಬೇಕು. ಈ ಬಾರಿ ಮತ್ತೆ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿ ಗೆಲ್ಲಿಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರ ಕೈಯನ್ನು ಬಲಪಡಿಸಬೇಕು. ಬಾಲರಾಜುರವರ ಗೆಲುವು ಖಚಿತವಾಗಿದೆ ಎಂದು ಹೇಳಿದ್ದಾರೆ.

ಈ ಸಂದರ್ಭದಲ್ಲಿ ಬಿಜೆಪಿ ಮೈಸೂರು ಜಿಲ್ಲಾ ಗ್ರಾಮಾಂತರ ನಿಕಟ ಪೂರ್ವ ಅಧ್ಯಕ್ಷೆ ಮಂಗಳ ಸೋಮಶೇಖರ್, ಜಿಪಂ ಮಾಜಿ ಸದಸ್ಯ ಸಿಂಧುವಳ್ಳಿ ಕೆಂಪಣ್ಣ, ಶಿವರಾಂ, ಮಾಜಿ ತಾಪಂ ಅಧ್ಯಕ್ಷ ಬಿ. ಎಸ್ ಮಹದೇವಪ್ಪ, ಬಿಜೆಪಿ ಮುಖಂಡರಾದ ಕುಂಬ್ರಳ್ಳಿ ಸುಬ್ಬಣ್ಣ, ಡಿ ಎನ್. ಲೋಕೇಶ್, ಅವಿನಾಶ್, ನಾಗೇಂದ್ರ, ಮೋಹನ್, ಅರುಣ್ ಸೇರಿದಂತೆ ಹಲವರು ಭಾಗವಹಿಸಿದ್ದರು.

ಬಿರುಗಾಳಿಗೆ ನೆಲಕಚ್ಚಿದ ಬಾಳೆ



■ ಕಾಯಕಯೋಗಿ ಸುದ್ದಿ

ನಂಜನಗೂಡು: ಬಿರುಗಾಳಿಗೆ ಬಾಳೆ ಬೆಳೆ ಸಂಪೂರ್ಣವಾಗಿ ನೆಲೆ ಕಚ್ಚಿರುವ ಘಟನೆ ನಂಜನಗೂಡು ತಾಲ್ಲೂಕಿನ ಹಲ್ಲರೆ ಗ್ರಾಮದಲ್ಲಿ ನಡೆದಿದೆ.

ಹತ್ತು ನಿಮಿಷಗಳ ಸಮಯ ಬೀಸಿದ ಬಿರುಗಾಳಿಗೆ ಬಾಳೆ ಬೆಳೆ ನಾಶವಾಗಿದೆ. ಗ್ರಾಮದ ರೈತರಾದ ಬಸವರಾಜ್ ಎಂಬುವವರು ತಮ್ಮ ಜಮೀನಿನಲ್ಲಿ ಸುಮಾರು 1.20 ಎಕರೆ ಪ್ರದೇಶದಲ್ಲಿ ಬೆಳೆದಿದ್ದ ಬಾಳೆ ಬೆಳೆ ಸಂಪೂರ್ಣವಾಗಿ ಮುರಿದು ಬಿದ್ದು ನೆಲ ಕಚ್ಚಿದೆ. ಗ್ರಾಮದ ರೈತರಾದ ಕೇಬಿರಪ್ಪ ಸ್ವಾಮಿ, ನೂರ್ ಅಹಮ್ಮದ್, ದಿಕ್ಷೀಯಾ ಸಾಹೇಬ್ ಸೇರಿದಂತೆ ಹಲವು ಜಮೀನುಗಳಲ್ಲಿ ಸುಮಾರು 25 ಕ್ಕೂ ಹೆಚ್ಚು ಎಕರೆ ಪ್ರದೇಶದಲ್ಲಿ ಬೆಳೆದಿದ್ದು ಬಾಳೆ ಬೆಳೆ ಸಂಪೂರ್ಣವಾಗಿ ನಾಶವಾಗಿದ್ದು ಲಕ್ಷಾಂತರ ರೂಪಾಯಿ ನಷ್ಟವಾಗಿದೆ ಎಂದು ರೈತರು ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ.

ಕೂಡಲೆ ಸರ್ಕಾರ ರೈತರಿಗೆ ಸೂಕ್ತ ಪರಿಹಾರವನ್ನು ನೀಡಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ಪರ ವಿವಿಧ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ

■ ಕಾಯಕಯೋಗಿ ಸುದ್ದಿ

ಹನೂರು :ಲೋಕಸಭಾ ಸಾರ್ವತ್ರಿಕಚುನಾವಣೆ ಚಾಮರಾಜನಗರ ಮೀಸಲು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸುನಿಲ್ ಬೋಸ್ ರವರ ಪರ ಚುನಾವಣೆ ಪ್ರಚಾರ ಹಮ್ಮಿಕೊಳ್ಳಲಾಯಿತ್ತು.



ಹನೂರು ತಾಲೂಕಿನ ವಿಧಾನಸಭಾ ಕ್ಷೇತ್ರವ್ಯಾಪ್ತಿಯಲ್ಲಿರುವ ಮದ್ದುವವನಹಳ್ಳಿ, ಹೊಂಡರಬಾಳು, ಇಂದುವಾಡಿ, ಹನೂರು, ಬಂಡಳ್ಳಿ ಇನ್ನಿತರೆ ಗ್ರಾಮಗಳಲ್ಲಿ ಚುನಾವಣೆ ಪ್ರಚಾರ ಮಾಡಲಾಯಿತ್ತು.

ಕಾರ್ಯಕ್ರಮಉದ್ದಾಟಿಸಿ ಮಾತಾನಾಡಿದ ಮಾಜಿ ಶಾಸಕ ಆರ್ ನರೇಂದ್ರ ಕೇಂದ್ರ ಸರ್ಕಾರದಲ್ಲಿರುವ ಸುಮಾರು 10 ವರ್ಷಗಳಿಂದ ಅಧಿಕಾರದಲ್ಲಿದ್ದರೂ ಬಿಜೆಪಿ ಸರ್ಕಾರ ನರೇಂದ್ರ ಮೋದಿ ಅಭಿವೃದ್ಧಿ ಶೂನ್ಯ ಹಾಗೂ ಕೋಮು ಕೋಮುಗಳ ಮಧ್ಯೆ ದ್ವೇಷಗಳ ಕಿಚ್ಚು ಉಟ್ಟಿಸಿ ಜನರನ್ನು ಕಿತ್ತಾಡವಂತೆ ಮಾಡುವುದೇ ಅವರ ಅಭಿವೃದ್ಧಿ ಆದ್ದರಿಂದ ತಾವು ಮತದಾರರು ಸುನಿಲ್ ಭೋಸ್ ಅವರಿಗೆ ಮತ ನೀಡಿ ಕೇಂದ್ರದಲ್ಲಿ ನಮ್ಮ ಕಾಂಗ್ರೆಸ್ ಸರ್ಕಾರ ರಾಹುಲ್ ಗಾಂಧಿ ಪ್ರಧಾನಮಂತ್ರಿ ಮಾಡಿ ಅವರು ನೀಡಿರುವ ಗ್ಯಾರಂಟಿ ಒಂದು ಕುಟುಂಬಕ್ಕೆ ಒಂದು ಲಕ್ಷ ರೂ ರೈತರು ಮಾಡುವಂತಹ ಸಾಲ ಮನ್ನಾ ಮಾಡುವುದು ಹಾಗೂ ಇನ್ನಿತರ ಅಭ್ಯತ ಗ್ಯಾರಂಟಿಗಳನ್ನು ನೀಡಿದ್ದಾರೆ, ಕರ್ನಾಟಕದಲ್ಲಿ ಸಿದ್ದರಾಮಯ್ಯ ನವರ ಗ್ಯಾರಂಟಿ ಯೋಜನೆ ಈಗಾಗಲೇ ಎಲ್ಲಾ ಸಮುದಾಯದವರು ಗ್ಯಾರಂಟಿ ಸೌಲಭ್ಯ ಪಡೆಯುತ್ತಿದ್ದಾರೆ, ಆದ್ದರಿಂದ ತಾವುಗಳು ಕಳೆದ ಚುನಾವಣೆಯಲ್ಲಿ ನನಗೆ ಎಷ್ಟು ಮತ ನೀಡಿದ್ದೀರಿ ಅದಕ್ಕಿಂತ ಹೆಚ್ಚು ಮತವನ್ನು ಕಾಂಗ್ರೆಸ್ ಪಕ್ಷಕ್ಕೆ ನೀಡಿ ನಮ್ಮ ತಾಕತ್ತು ಏನೆಂದು ತೋರಿಸಬೇಕೆಂದು ಕಾರ್ಯಕರ್ತರಿಗೆ ತಿಳಿಸಿದರು.

ಮಾಜಿ ಸಂಸದ ಶಿವಣ್ಣ, ಸಚಿವ ಹೆಚ್ ಸಿ ಮಹದೇವಪ್ಪ, ಮಾಜಿ ಶಾಸಕ ಜಿ ಎನ್ ನಂಜುಂಡಸ್ವಾಮಿ, ವಿಷ್ಣು ಕುಮಾರ್ , ಜಾವಾದ್ ಅಹಮದ್. ಗ್ರಾಮ ಪಂಚಾಯತಿ ಸದಸ್ಯರಾದ ಶಾಹುಲ್ ಅಹಮದ್ , ಬಾಬು ವೆಂಕಟಾಚಲ ನವನೀತ ಗೌಡ, ಮುರುಡೇಶ್ವರ ಸ್ವಾಮಿ, ಚೇತನ್ ದೊರೆರಾಜ್, ನಾಗೇಂದ್ರ, ಪ ಪ ಗಿರೀಶ್, ಹರೀಶ್, ಸಂಪತ್ತು ಹಾಗೂ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಇದ್ದರು.

*ಸಂವಿಧಾನಕ್ಕೆ ಅಪಚಾರ ಮಾಡಿರುವವರೇ ಎಚ್*ಸಿಎಂ*

ತಗಡೂರು ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ವಾಗ್ದಾಳಿ

■ ಕಾಯಕಯೋಗಿ ಸುದ್ದಿ

ನಂಜನಗೂಡು: ಸಂವಿಧಾನಕ್ಕೆ ಅಪಚಾರ ಮಾಡಿರುವವರೇ ಡಾ.ಹೆಚ್ ಸಿ ಮಹದೇವಪ್ಪ ರವರು. ಈಗ ಮಗನನ್ನು ಲೋಕಸಭಾ ಚುನಾವಣೆಗೆ ನಿಲ್ಲಿಸಿದ್ದಾರೆ ಎಂದು ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಎಸ್.ಬಾಲರಾಜು ಹೇಳಿದರು.

ನಂಜನಗೂಡು ತಾಲ್ಲೂಕಿನ ತಗಡೂರು ಗ್ರಾಮದಲ್ಲಿ ಬಿಜೆಪಿ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಸಚಿವರ ಪುತ್ರನಷ್ಟು ಅಪಚಾರ ಮಾಡಿದ್ದಾರೆ ಅಂತ ನಾನು ಹೇಳಬೇಕಾಗಿಲ್ಲ. ನೀವು ಮತ್ತು ನರಸೀಪುರದ ಜನತೆಗೆ ಈ ವಿಷಯ ಗೊತ್ತು. ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹದೇವಪ್ಪನವರು ಸುಮಾರು 25 ಸಾವಿರ ಕೋಟಿ ರೂ. ಎಸ್ಸಿ, ಎಸ್ಟಿ ಹಣವನ್ನು ಬೇರೆ ಯೋಜನೆಗಳಿಗೆ ಬಳಕೆ ಮಾಡಿಕೊಂಡು ಈ ಜನಾಂಗಗಳಿಗೆ ಅನ್ಯಾಯವನ್ನು ಮಾಡಿದ್ದಾರೆ. ಅಂಬೇಡ್ಕರ್ ಅವರ ಆಶಯಗಳನ್ನು ಮರೆತಿದ್ದಾರೆ . ಈ ಹಣದಿಂದ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಬಹುದಾಗಿತ್ತು. ಆದರೆ, ಇದ್ಯಾವುದೋ ಅವರಿಗೆ ಸಾಧ್ಯವಾಗಲಿಲ್ಲ. ಸೋಲಿನ ಭೀತಿಯಿಂದ ನನ್ನ ಬಗ್ಗೆ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಾ ಬಂದಿದ್ದಾರೆ. ಇದ್ಯಾವುದರ ಬಗ್ಗೆ ಕಾರ್ಯಕರ್ತರು ತಲೆಕೆಡಿಸಿಕೊಳ್ಳದೆ ನನ್ನನ್ನು ಲೋಕಸಭಾ ಚುನಾವಣೆಯಲ್ಲಿ ಗೆಲ್ಲಿಸಬೇಕೆಂದು ಮನವಿ ಮಾಡಿದರು.



ಈ ಸಂದರ್ಭದಲ್ಲಿ ಬಿಜೆಪಿ ಹಿರಿಯ ಮುಖಂಡ ಎಸ್. ಮಹದೇವಯ್ಯ, ಎಸ್ಸಿ ಮೋರ್ಚಾ ಮೈಸೂರು ಜಿಲ್ಲಾಧ್ಯಕ್ಷ ಸಿ.ಎಂ ಮಹದೇವಯ್ಯ, ಮಾಜಿ ಜಿ.ಪಂ ಸದಸ್ಯ ಬಿಎನ್ ಸದಾನಂದ, ಸತೀಶ್, ಮಾಜಿ ಜಿಪಂ ಅಧ್ಯಕ್ಷ ಸಿದ್ದವೀರಪ್ಪ, ನಾಗೇಶ್ ನಾಯ್ಕ, ಕಾರ್ಯ ರಾಜೇಂದ್ರ, ಚಿನ್ನಬಿಳ್ಳಿ ಮಂಜು, ಕುಮಾರ್, ವೆಂಕಟರಮಣ ಶೆಟ್ಟಿ, ತಗಡೂರು ಮಾದು, ಜ್ಯೋತಿ ನಾಗೇಶ್ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಭಾಗವಹಿಸಿದ್ದರು.

ಎಚ್.ಡಿ.ಕುಮಾರಸ್ವಾಮಿಗೆ ಮತ ನೀಡಿ ರೈತರ ಪರ ಕೆಲಸ ಮಾಡಲು ಅನುವು ಮಾಡಿಕೊಡಿ

■ ಕಾಯಕಯೋಗಿ ಸುದ್ದಿ

ಮಂಡ್ಯ : ಭಾರತದ ಭವಿಷ್ಯ ನಿರ್ಧಾರವಾಗುವುದು ಏ.26 ರಂದು. ಹಾಗಾಗಿ ಹೃದಯವಂತ ಹಾಗೂ ಬಡವರ ಬಗ್ಗೆ ಕಾಳಜಿ ಇರುವ ರೈತ ನಾಯಕ ಎಚ್.ಡಿ.ಕುಮಾರಸ್ವಾಮಿ ಅವರಿಗೆ ತಮ್ಮ ಅಮೂಲ್ಯ ಮತ ನೀಡುವ ಮೂಲಕ ರೈತರ ಪರವಾಗಿ ಕೆಲಸ ಮಾಡಲು ಅನುವು ಮಾಡಿಕೊಡಬೇಕು ಎಂದು ಮಾಜಿ ಸಚಿವ ಪ್ರಮೋದ್ ಮಧ್ವರಾಜ್ ಮನವಿ ಮಾಡಿದರು.

ನಗರದ ಎಸ್.ಬಿ.ಸಮುದಾಯ ಭವನದಲ್ಲಿ ಬಿಜೆಪಿ ಮತ್ತು ಜಾ.ದಳ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಹಿಂದುಳಿದ ವರ್ಗಗಳ ಸಮನ್ವಯ ಸಮಾವೇಶದಲ್ಲಿ ಮಾತನಾಡಿದ ಅವರು, ರೈತರ ಆಶಾಕಿರಣ ಎಚ್.ಡಿ. ಕುಮಾರಸ್ವಾಮಿ ಅವರು ಮಂಡ್ಯ ಜಿಲ್ಲೆಯಲ್ಲಿ ಸ್ಪರ್ಧಿಸಿರುವುದು ನಮ್ಮ ಜನರ ಪುಣ್ಯ ಯಾವುದೇ ಆರೋಪಗಳಿಗೆ ಕಿವಿಗೊಡದೆ ಹಿಂದುಳಿದ ವರ್ಗದವರು ಸೇರಿದಂತೆ ಎಲ್ಲ ವರ್ಗದ ಜನರು ಅವರನ್ನು ಬಹುಮತಕ್ಕಿಂತಲೂ ಗೆಲ್ಲಿಸಬೇಕೆಂದು ಕೋರಿದರು.

ಕೋವಿಡ್ ಬಂದಂತಹ ಸಂದರ್ಭದಲ್ಲಿ ಅಮೆರಿಕಾದಲ್ಲಿ ಒಂದು ವ್ಯಾಕ್ಸಿನ್‌ಗೆ 8 ಸಾವಿರ ಕೊಡಬೇಕಿತ್ತು. ಒಟ್ಟು ಎರಡು ವ್ಯಾಕ್ಸಿನ್ ತೆಗೆದುಕೊಳ್ಳಲು ಬರೋಬ್ಬರಿ 16 ಸಾವಿರ ಕೊಡಬೇಕಿತ್ತು. ಭಾರತದಲ್ಲಿ ಕೋವಿಡ್ ತಡೆಗಟ್ಟಲು ಎರಡು ವ್ಯಾಕ್ಸಿನ್ ಅಗತ್ಯವಿತ್ತು, ಪ್ರತಿಯೊಬ್ಬರಿಗೂ ಉಚಿತವ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-4
20-04-2024
ತುಮಕೂರು-ಚಾಮರಾಜನಗರ

ವಿಜೃಂಭಣೆಯ ಬಸವ ಕಂಡಾಯ ಮೆರವಣಿಗೆ

ಹನೂರು: ತಾಲೂಕಿನ ಬಂಡಳ್ಳಿ ಗ್ರಾಮದಲ್ಲಿ ಕುರುಬನಕಟ್ಟೆ ಕಂಡಾಯ ಹಾಗೂ ಬಂಡಳ್ಳಿ ಬಸವ ಕಂಡಾಯ ಮೆರವಣಿಗೆ ಅತ್ಯಂತ ಭಕ್ತಿಭಾವದಿಂದ ಜರುಗಿತು.

ಇದೇ ಪ್ರಥಮ ಬಾರಿಗೆ ಬಂಡಳ್ಳಿ ಗ್ರಾಮದಲ್ಲಿ ಕುರುಬನ ಕಟ್ಟೆ ಕಂಡಾಯ ಮೆರವಣಿಗೆ ನಾಯಕ ಸಮುದಾಯದ ವತಿಯಿಂದ ವಿಜೃಂಭಣೆಯಿಂದ ಜರುಗಿದ್ದು ವಿಶೇಷವಾಗಿತ್ತು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಎರಡು ಕಂಡಾಯ ಉತ್ಸವ ಮೂರ್ತಿಗಳು ಮೆರವಣಿಗೆಯಲ್ಲಿ ಸಾಗಿದವು. ಗ್ರಾಮದ ಜನತೆ ದೇವರಿಗೆ ನಮಸ್ಕರಿಸಿ ತಮ್ಮ ಇಷ್ಟಾರ್ಥ ನೆರವೇರಲೆಂದು ಪ್ರಾರ್ಥಿಸಿದರು.

ಮಳೆ ಬೆಳೆಗೆ ಪ್ರಾರ್ಥನೆ: ಮಳೆ ಇಲ್ಲದೆ ಬರಗಾಲದ ಭೀತಿ ಎದುರಿಸುತ್ತಿರುವ ಒಸ್ಸಲೆಯಲ್ಲಿ ಭಕ್ತರು ದೇವರಲ್ಲಿ ಉತ್ತಮ ಮಳೆ ಬೆಳೆಯಾಗಲೆಂದು ಬೇಡಿದರು.

ಗ್ರಾಮದ ತುಂಬೆಲ್ಲಾ ದೂಪದ ಆರತಿ : ದಿಗ್ಗಜ ದೇವರುಗಳ ಮೆರವಣಿಗೆ ವೇಳೆ ಕಪ್ಪು ದೂಳತದ ಘಮಲು ರಾಚಿತು. ಕಂಡಾಯಗಳಿಗೆ ವಿಶೇಷ ಪೂಜೆ ಸಲ್ಲಿಸಿ ಆಕರ್ಷಕ ಹೂವಿನ ಅಲಂಕಾರಗಳನ್ನು ಕೈಗೊಳ್ಳಲಾಗಿತ್ತು.



ಈ ಸಂದರ್ಭದಲ್ಲಿ ಗ್ರಾಮದ ಶ್ರೀನಿವಾಸ ಮಹೇಶ, ರಂಗಸ್ವಾಮಿ, ರಾಚಪ್ಪ ಸೇರಿದಂತೆ ನಾಯಕ ಸಮುದಾಯದ ಮುಖಂಡರುಗಳು, ಕುಲಸ್ಥರು ಉಪಸ್ಥಿತರಿದ್ದರು.

ಚುನಾವಣಾ ವೀಕ್ಷಕರ ನೇಮಕ

ರಾಮನಗರ: 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಹಿನ್ನೆಲೆಯಲ್ಲಿ ಸಾಮಾನ್ಯ ವೀಕ್ಷಕರು ಹಾಗೂ ಚುನಾವಣಾ ವೆಚ್ಚ ವೀಕ್ಷಕರನ್ನು ಚುನಾವಣಾ ಆಯೋಗ ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಅವರು ತಿಳಿಸಿದ್ದಾರೆ.

ಕುಣಿಗೆಲ್, ರಾಜರಾಜೇಶ್ವರಿ, ಬೆಂಗಳೂರು ದಕ್ಷಿಣ, ಆನೇಕಲ್, ಮಾಗಡಿ, ರಾಮನಗರ, ಚನ್ನಪಟ್ಟಣ, ಕನಕಪುರ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಡಿ. ಅಮೋಯ್ ಕುಮಾರ್ ಮೊ.ನಂ. 7349648632 ಅವರನ್ನು ಸಾಮಾನ್ಯ ವೀಕ್ಷಕರನ್ನಾಗಿ ನೇಮಿಸಲಾಗಿದೆ. ಇವರಿಗೆ ಚುನಾವಣಾ ವೆಚ್ಚ ಮೊ.ನಂ. 9611077744 ಇವರನ್ನು ಲೈಸನಿಂಗ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ಗೋಪಿನಾಥಂನಲ್ಲಿ ಗಮನ ಸೆಳೆದ ಮತದಾನ ಜಾಗೃತಿ ಕಾರ್ಯಕ್ರಮ: ಕಣ್ಮನ ಸೆಳೆದ ದೀಪನಡಿಗೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:– ಇದೇ ಏಪ್ರಿಲ್ 26ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಅಂಗವಾಗಿ ಜಿಲ್ಲೆಯ ಗಡಿ ಭಾಗದಲ್ಲಿರುವ ಗೋಪಿನಾಥಂ ಗ್ರಾಮದ ಶಕ್ತಿ ಮಾರಿಯಮ್ಮ ದೇವಸ್ಥಾನದ ಆವರಣದಲ್ಲಿ ತಾಲೂಕು ಪಂಚಾಯತ್ ಹಾಗೂ ತಾಲೂಕು ಸ್ವೀಪ್ ಸಮಿತಿ ವತಿಯಿಂದ ವಿಶಿಷ್ಟವಾಗಿ ಹಮ್ಮಿಕೊಳ್ಳಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ದೀಪನಡಿಗೆ ನಾಗರಿಕರ ಕಣ್ಮನ ಸೆಳೆಯಿತು.

ಗ್ರಾಮದ ಶಕ್ತಿ ಮಾರಿಯಮ್ಮ ದೇವಾಲಯದ ಪ್ರವೇಶದ್ವಾರದಲ್ಲಿ ಭಾರತ ನಕ್ಷೆಯ ಸುತ್ತಲು ದೀಪಗಳನ್ನು ಹಚ್ಚುವ ಮೂಲಕ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಲಕ್ಷ್ಮೀ ಅವರು ದೀಪನಡಿಗೆ ಕಾರ್ಯಕ್ರಮಕ್ಕೆ ನಗಾರಿ ಬಾರಿಸುವ ಮೂಲಕ ಚಾಲನೆ ನೀಡಿದರು.

ದೀಪನಡಿಗೆ ಮೆರವಣಿಗೆಯಲ್ಲಿ ಸ್ವೀಪ್ ತಂಡದ ಅಧಿಕಾರಿಗಳು, ಪೂರ್ಣಕುಂಭ ಹೊತ್ತ ಹೆಂಗೆಳೆಯರು ಸೇರಿದಂತೆ ಗ್ರಾಮದ ಸಾರ್ವಜನಿಕರು ಚುನಾವಣಾ ಘೋಷವಾಕ್ಯ ಗಳಾದ ಚುನಾವಣಾ ಪರ್ವ-ದೇಶದ ಗರ್ವ, ಮತದಾನ ನಮ್ಮ ಹಕ್ಕು, ಎಲ್ಲರೂ ನೈತಿಕ ಮತದಾನ ಬೆಂಬಲಿಸಿ, ಕಡ್ಡಾಯವಾಗಿ ಮತದಾನ ಮಾಡಿ, ಇನ್ನಿತರ ಮೈನವಿರೇಳಿಸುವ ಜಾಗೃತಿ ಘೋಷವಾಕ್ಯಗಳನ್ನು ಮೊಳಗಿಸಿ ನಾಗರಿಕರಿಗೆ ಮತದಾನದ ಅರಿವು ಮೂಡಿಸಿದರು.

ಇದೇ ತಿಂಗಳ 26ರಂದು ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಮತದಾನ ನಡೆಯಲಿದೆ. ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ ಯಾರು



ಸಹ ಮತದಾನದಿಂದ ವಂಚಿತರಾಗಬೇಡಿ. ಗ್ರಾಮದ ಪ್ರತಿಯೊಬ್ಬ ನಾಗರಿಕರು ಮತಗಟ್ಟೆಗೆ ತೆರಳಿ ನೈತಿಕ ಮತದಾನ ಮಾಡಬೇಕು ಎಂದ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಬಳಿಕ ನೆರೆದಿದ್ದ ಗ್ರಾಮಸ್ಥರಿಗೆ ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಹನೂರು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್ ಅವರು ಮಾತನಾಡಿ ಮತದಾನ ಮಾಡುವುದು ನಮ್ಮ ಹಕ್ಕು ಯಾರು ಸಹ ಮತದಾನ ದಿಂದ ದೂರ ಉಳಿಯಬಾರದು. ಪ್ರತಿಯೊಬ್ಬರು ತಪ್ಪದೇ ಮತಚಲಾಯಿಸಿ ಪ್ರಜಾಪ್ರಭುತ್ವದ ಹಬ್ಬವನ್ನು ಎಲ್ಲರೂ ಆಚರಿಸಿ ಎಂದರು.

ಸಹಾಯಕ ನಿರ್ದೇಶಕರು, ತಾಲೂಕಿನ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ನರೇಗಾ ತಾಂತ್ರಿಕ ಸಹಾಯಕ ಎಂಜಿನಿಯರ್, ಬಿ.ಎಫ್.ಟಿ ಮತ್ತು ಎನ್.ಆರ್.ಎಲ್.ಎಂ ಸದಸ್ಯರು ಈ ಸಂದರ್ಭದಲ್ಲಿ ಹಾಜರಿದ್ದರು.

ಕಾವೇರಿ ದಡದಲ್ಲಿ ಸ್ವೀಪ್ ನೋಡಲ್ ಅಧಿಕಾರಿಗಳಿಂದ ತೆಪ್ಪೋತ್ಸವದ ಮೂಲಕ ಮತದಾನ ಜಾಗೃತಿ

ಚಾಮರಾಜನಗರ:– ಲೋಕಸಭಾ ಚುನಾವಣೆ 2024-ರ ಸಂಬಂಧ ಜಿಲ್ಲೆಯ ಗಡಿ ಹಾಗೂ ಕೊನೆಯ ಗ್ರಾಮ ಪಂಚಾಯತಿ ಗೋಪಿನಾಥಂ ಗ್ರಾಮದ ಬಳಿಯಿರುವ ಹೊಗೇನೆಕಲ್ ನಲ್ಲಿ ಇಂದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿಗಳಾದ ಪಿ.ಎಸ್ ವಸ್ತದ್ ಅವರಿಂದ ಕಾವೇರಿ ದಡದ ಮಧ್ಯಭಾಗದಲ್ಲಿ ತೆಪ್ಪೋತ್ಸವದ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು.

ಮತದಾನ ಜಾಗೃತಿ ಕಾರ್ಯಕ್ರಮಕ್ಕೂ ಮೊದಲು ಗೋಪಿನಾಥಂ ಗ್ರಾಮದ ಮಹಿಳೆಯರು ಗ್ರಾಮದಿಂದ ಹೊಗೇನೆಕಲ್ ಜಲಪಾತದ ದ್ವಾರದ ಮುಂಭಾಗದ ಕಾವೇರಿ ದಡದವರೆಗೆ ಪೂರ್ಣ ಕುಂಭ ಹಿಡಿದು ರಾಜ್ಯ ಸ್ವೀಪ್ ನೋಡಲ್ ಅಧಿಕಾರಿಗಳಾದ ಪಿ.ಎಸ್ ವಸ್ತದ್ ಅವರನ್ನು ಸ್ವಾಗತಿಸಿದರು.

ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿಗಳಾದ ಪಿ.ಎಸ್ ವಸ್ತದ್ ಅವರು ಎಲ್ಲರೂ ಏಪ್ರಿಲ್ 26ರಂದು ನಡೆಯಲಿರುವ ಚುನಾವಣೆಯಲ್ಲಿ ಮತದಾನ ಮಾಡಬೇಕು. ನಿಮ್ಮ ಹೆಸರು ಮತದಾನ ಪಟ್ಟಿಯಲ್ಲಿ ಇರುವ



ಬಗ್ಗೆ ಹೆಲ್ಪ್ ಲೈನ್‌ಆಪ್ ಮುಖಾಂತರ ಖಚಿತಪಡಿಸಿಕೊಳ್ಳಿ, ಚುನಾವಣಾ ಸಂಬಂಧ ಯಾವುದೇ ಅಕ್ರಮ ಚಟುವಟಿಕೆಗಳು ಕಂಡು ಬಂದರೆ ಸಿ ವಿಜಿಲ್ ಆಪ್ ನಲ್ಲಿ ದೂರು ಸಲ್ಲಿಸಬಹುದು. ಎಲ್ಲರೂ ನ್ಯಾಯ ಸಮ್ಮತ ಮತದಾನ ಮಾಡಿ ಹಾಗೂ ನೈತಿಕ ಮತದಾನ ಬೆಂಬಲಿಸಿ ಎಂದರು.

ನಂತರ ಮಾ�ರಿಕೊಟ್ಟಾಯಿ ಮತಗಟ್ಟೆ ಸಂಖ್ಯೆ 141 ರಲ್ಲಿ ಮತದಾನದ ಜಾಗೃತಿ ಘೋಷಣೆ ನೆರವೇರಿಸಿ ಬಳಿಕ ಮತಗಟ್ಟೆ ವೀಕ್ಷಣೆ ಮಾಡಿ ಮೂಲ ಸೌಕರ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು.

ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ಅವರು ಹೂ, ಹೆಂಡ ಇತರೆ ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತ ಚಲಾಯಿಸಬೇಕು. ಮತದಾನ ನಿಮ್ಮ ಮುಂದಿನ ಪೀಳಿಗೆಗೆ ಭವಿಷ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು. ಇದೇ ವೇಳೆ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಹನೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ್, ಸಹಾಯಕ ನಿರ್ದೇಶಕರಾದ ರವೀಂದ್ರ, ತಾಲೂಕು ಪಂಚಾಯತಿ ಹಾಗೂ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ನರೇಗಾ ಸಹಾಯಕ ಎಂಜಿನಿಯರ್, ಇತರರು ಈ ಸಂದರ್ಭದಲ್ಲಿ ಹಾಜರಿದ್ದರು.

ಚೊಂಬುಗಳ ಸರದಾರ ಕಾಂಗ್ರೆಸ್ : ಚೊಂಬಿನ ಜಾಹಿರಾತಿಗೆ ಸುರೇಶ್ ಕುಮಾರ್ ಟಾಂಗ್



ಚಾಮರಾಜನಗರ: ಕಾಂಗ್ರೆಸ್ ಸರ್ಕಾರವೇ ಚೊಂಬುಗಳ ಸರದಾರ ಎಂದು ಸಚಿವ ಸುರೇಶ್ ಕುಮಾರ್ ಕಿಡಿಕಾರಿದರು.

ಕಾಂಗ್ರೆಸ್ ಸರ್ಕಾರ ಕೊಟ್ಟರುವ ಚೊಂಬಿನ ಜಾಹಿರಾತು ಸಂಬಂಧ ಚಾಮರಾಜನಗರದಲ್ಲಿ ಮಾಧ್ಯಮವರೊಂದಿಗೆ ಅವರು ಮಾತನಾಡಿಸಿಎಂ ಗೆ ಚೊಂಬು ಕೊಡಲು ಡಿಸಿಎಂ ಕಾಯ್ದಿದ್ದಾರೆ, ಡಿಸಿಎಂಗೆ ಚೊಂಬು ಕೊಡಲು ಸಿಎಂ ಕಾಯ್ದಿದ್ದಾರೆ, ಇವರಿಬ್ಬರಿಗೂ ಚೊಂಬು ಕೊಡಲು ಜನ ಕಾಯ್ದಿದ್ದಾರೆ ಎಂದು ವ್ಯಂಗ್ಯ ಮಾಡಿದರು.

ಚೊಂಬುಗಳ ಸರದಾರ ಎಂದರೆ ಅದು ಕಾಂಗ್ರೆಸ್, ಕಳೆದ 10 ತಿಂಗಳುಗಳಿಂದ ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಹಣವನ್ನು ಬಿಡುಗಡೆ ಮಾಡದಿರುವುದು ನಾಗರಿಕರಿಗೆ ನೀವು ಕೊಟ್ಟರುವ ಚೊಂಬು ಅಲ್ಲವೇ? ನಿರುದ್ಯೋಗಿ ಯುವಕರಿಗೆ ರೂ. 2000 ಕೊಡುತ್ತೇವೆಂದು ಭರವಸೆ ನೀಡಿ ಮತ ಪಡೆದು ಕಳೆದ 10 ತಿಂಗಳಲ್ಲಿ ಒಬ್ಬರಿಗೂ ನಿರುದ್ಯೋಗ-ಭತ್ಯೆ ನೀಡದೆ ಚೊಂಬು ನೀಡಿರುವುದು ನೀವಲ್ಲವೇ? ಹಿಂದಿನ ಬಿಜೆಪಿ ಸರ್ಕಾರ ರಾಜ್ಯದ ಪ್ರತಿ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ವರ್ಷಕ್ಕೆ ನಾಲ್ಕು ಸಾವಿರ ರೂಪಾಯಿ ಪ್ರಧಾನಮಂತ್ರಿ ಕಿಸಾನ್ ಸನ್ಮಾನ ಯೋಜನೆ ಅಡಿ ಹಣ ನೀಡಿ ತನ್ನ ಕಾಳಜಿ ತೋರಿತ್ತು. ಏನೂ ಕಾರಣ ನೀಡದೆ ಅದನ್ನು ನಿಲ್ಲಿಸಿ ಈ ಅನ್ನದಾತರಿಗೆ ಚೊಂಬು ನೀಡಿರುವುದು ನೀವೇ ಅಲ್ಲವೇ?

ಹೀಗೆ ದೇಶದ ಚೊಂಬು ಗಳ ಸರದಾರ ನೀವೇ ಆಗಿರುವಾಗ ಬೇರೆಯವರಿಗೆ ಯಾಕೆ ಆ ಪ್ರಶ್ನೆ ಎಂದು ಕಿಡಿಕಾರಿದರು.

ಹುಬ್ಬಳ್ಳಿಯಲ್ಲಿ ನೇಹಾ ಕೊಲೆ ಪ್ರಕರಣದ ಬಗ್ಗೆ ಪ್ರತಿಕ್ರಿಯೆ ಕೊಟ್ಟಿದ ಅವರು, ಈ ಕೊಲೆ ನಿಜಕ್ಕೂ ದುರಂತದ ಘಟನೆ ನಾನು ಸಿಸಿಟಿವಿಯನ್ನ ನೋಡಿದ್ದೇನೆ. ಚಾಕು ಇರಿದಾಗ ಈ ಹುಡುಗಿಯ ನೋವು ಹೇಗಿರಬಹುದು..?ಅದನ್ನ ನೋಡಿದ ತಂದೆ ಮತ್ತು ತಾಯಿಗೆ ಹೇಗೆ ಸಂಕಟ ಆಗಿರಬಹುದು,

ಯಾವ ದಾಕ್ಷಿಣ್ಯ ಇಟ್ಟುಕೊಳ್ಳದೇ ಮುಕ್ತವಾಗಿ ವಿಚಾರಣೆ ನಡೆಸ ಬೇಕು, ಒಂದೊಂದು ಜೀವವೂ ಕೂಡ ಅಮೂಲ್ಯಈ ರೀತಿಯ ದುರುಳರಿಗೆ ಕಠಿಣ ಶಿಕ್ಷೆಯಾಗ ಬೇಕು, ಸರ್ಕಾರ ಈ ಬಗ್ಗೆ ಕಟ್ಟು ನಿಟ್ಟಿನ ಕ್ರಮಕ್ಕೆ ಮುಂದಾಗ ಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಅಭ್ಯರ್ಥಿ ಬಾಲರಾಜ್ ಗೆ ಇಲ್ಲಿ ಒಳ್ಳೆ ಬೆಂಬಲ ಇದೆ, ಬಾಲರಾಜ್ ಓವರ್ ಸರಳ ಮತ್ತು ಸಜ್ಜನ ರಾಜಕಾರಣಿ, ಅತಿ ಹೆಚ್ಚಿನ ಮತಗಳ ಅಂತರದಲ್ಲಿ ಬಿಜೆಪಿ ಗೆಲ್ಲುವುದು ಖಚಿತ, ಮೋದಿ ಆಡಳಿತವನ್ನ ಜನ ಬಯಸಿದ್ದಾರೆಹಾಗಾಗಿ ಈ ಬಾರಿಯು ಬಾಲರಾಜ್ ಗೆಲುವು ದಾಖಲಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಬಿಎಸ್ಪಿ ಅಭ್ಯರ್ಥಿ ಪರ ಕೃಷ್ಣಮೂರ್ತಿ ಮತಯಾಚನೆ

ಗುಂಡ್ಲುಪೇಟೆ :– ತಾಲ್ಲೂಕಿನ ಹೋಬಳಿ ಕೇಂದ್ರ ತೆರಕಣಾಂಬಿ ಗ್ರಾಮದಲ್ಲಿ ಚಾಮರಾಜನಗರ ಲೋಕಸಭಾ ಕ್ಷೇತ್ರದ ಬಿಎಸ್ ಪಿ ಅಭ್ಯರ್ಥಿಯಾದ ಎಂ.ಕೃಷ್ಣಮೂರ್ತಿ ಅವರು ಮತಯಾಚನೆ ಮಾಡಿದರು.

ಬಸ್ ನಿಲ್ದಾಣದ ಬಳಿ ಸಾರ್ವಜನಿಕರ ಕುರಿತು ಮಾತನಾಡಿದ ಅವರು ಚಾಮರಾಜ ನಗರ ಜಿಲ್ಲೆಯ ಲ್ಲಿ ಇದುವರೆಗೆ ಆಳ್ವಿಕೆ ಮಾಡಿರುವ ಸಂಸದರು ಶಾಸಕರು ಶೈಕ್ಷಣಿಕ ಆರೋಗ್ಯ ಸಾವಾಜಿಕ ಕೃಷಿ ಆರ್ಥಿಕ ಕ್ಷೇತ್ರಗಳಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಹೊಂದುವ ಕೆಲಸಗಳನ್ನು ಮಾಡಿಲ್ಲ ಚಾಮರಾಜನಗರ ಜಿಲ್ಲೆಯ ಆರೋಗ್ಯ ಕೇಂದ್ರ ಗಳು ಇದ್ದರೂ ಕೂಡ ಇನ್ನೂ ತುರ್ತು ಚಿಕಿತ್ಸೆ ಸೇವೆಗಳಿಗೆ ಸಕಾಲದಲ್ಲಿ ಆರೋಗ್ಯ ಸೇವೆ ಸಿಗುತ್ತಿಲ್ಲ ಉತ್ತಮ ವಾದ ಶಾಲಾ ಕಾಲೇಜುಗಳು ಇದ್ದರು ಕೂಡ ಶಿಕ್ಷಕರು ಉಪ ನ್ಯಾಸಕರು ಇಲ್ಲ ಹಾಗೆಯೇ ಕೃಷಿ ಕ್ಷೇತ್ರದಲ್ಲಿ ಇನ್ನೂ ಹೆಚ್ಚಿನ ರೀತಿಯಲ್ಲಿ ಅಭಿವೃದ್ಧಿ ಹೊಂದಲು ನಾನಾ ರೀತಿಯ ಸೌಲಭ್ಯ ಗಳನ್ನು ತರಲು ಅವಕಾಶಗಳು ಇದ್ದರು ಕೂಡ ಇಲ್ಲಿನ ಸಂಸದರು ಶಾಸಕರು ಯಾವುದೇ ರೀತಿಯಲ್ಲಿ ಕೆಲಸ ಮಾಡುತ್ತಿಲ್ಲ ಕಾಂಗ್ರೆಸ್ ಬಿಜೆಪಿ ಪಕ್ಷಗಳು ಬರೀ ಮಾತುಗಳನ್ನು



ಹಾಡುತ್ತಲೇ ಜನರಿಗೆ ಭರವಸೆಗಳನ್ನು ನೀಡುತ್ತಾ ಐದು ವರ್ಷಗಳ ಗೊಮ್ಮೆ ಬಂದು ನಿಮ್ಮ ಬಳಿ ನಿಲ್ಲುತ್ತಾರೆ ಪ್ರಜ್ಞಾವಂತ ಮತದಾರರು ಬಿಎಸ್ ಪಿಗೆ ಮತ ನೀಡಿ ಅವಕಾಶ ಮಾಡಿಕೊಡುವ ಮೂಲಕ ಸಂವಿಧಾನ ಜಾರಿ ಮಾಡಲು ಅವಕಾಶ ಮಾಡಿಕೊಡಬೇಕು ಬಿಎಸ್ ಪಿ ಪಕ್ಷದ ಚಿಹ್ನೆಯೆ ಸಂಪೂರ್ಣವಾಗಿ ಸಂವಿಧಾನವನ್ನು ಜಾರಿ ಮಾಡುವುದು ಎಂದು ಹೇಳಿದರು.

ಮತ ಪ್ರಚಾರದಲ್ಲಿ ಚಾಮರಾಜನಗರ ಜಿಲ್ಲಾಧ್ಯಕ್ಷ ನಾಗಯ್ಯ , ಸಂಯೋಜಕ ಗೋವಿಂದರಾಜು ಮಾಡ್ರಹಳ್ಳಿ, ಬಿಎಸ್ ಪಿ ಹಿರಿಯ ಮುಖಂಡ ಕೆಲಸೂರು ರಾಚೇಶ್, ಮಾಡ್ರಹಳ್ಳಿ ಶ್ರೀನಿವಾಸ್, ಮಹದೇವಸ್ವಾಮಿ, ಮೂಕಹಡಹಳ್ಳಿ ನವೀನ್ ಮತ್ತಿತರರು ಉಪಸ್ಥಿತರಿದ್ದರು.

ಕಾಂಗ್ರೆಸ್ ಪಕ್ಷದಿಂದ ಮಾದಿಗ ಸಮುದಾಯಕ್ಕೆ ಅನ್ಯಾಯ
ಕಾಂಗ್ರೆಸ್ ಪಕ್ಷ ಯಾವುದೇ ಕಾರಣಕ್ಕೂ ಕೇಂದ್ರದಲ್ಲಿ ಅಧಿಕಾರಕ್ಕೆ ಬರಲು ಬಿಡಬಾರದು

■ ಕಾಯಕಯೋಗಿ ಸುದ್ದಿ

ಕೊರಟಗೆರೆ: ಮಾದಿಗ ಸಮುದಾಯದ ವಿರೋಧಿ ಕಾಂಗ್ರೆಸ್ ಪಕ್ಷವನ್ನ ದೂರ ಇಟ್ಟು, ಬಿಜೆಪಿ ಮತ್ತೆ ಅಧಿಕಾರಕ್ಕೆ ತಂದು ನರೇಂದ್ರ ಮೋದಿಯವರನ್ನ ಮತ್ತೆ ಪ್ರಧಾನಿ ಮಾಡಲು ಬಿಜೆಪಿ ಪಕ್ಷಕ್ಕೆ ಮತ ನೀಡಿ ಎಂದು ಮಾದಿಗ ದಂಡೋರ ಮೀಸಲಾತಿ ಹೋರಾಟ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಮಂದಕೃಷ್ಣ ಮಾದಿಗ ಕಾಂಗ್ರೆಸ್ ವಿರುದ್ಧ ಗುಡುಗಿದರು.

ಪಟ್ಟಣದ ವಾಸವಿ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಲಾಗಿದ್ದ ಬಿಜೆಪಿ ಅಭ್ಯರ್ಥಿ ವಿ.ಸೋಮಣ್ಣ ಪರ ಸಭೆ ಹಾಗೂ ಮಾದಿಗ ಸಮುದಾಯದ ಬೃಹತ್ ಸಮಾವೇಶವನ್ನ ಉದ್ಘಾಟಿಸಿ ಮಾತನಾಡಿದರು

ರಾಜ್ಯದಲ್ಲಿ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹಾಗೂ ಕೇಂದ್ರದಲ್ಲಿ ಕೆಪಿಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸದಾಶಿವ ಆಯೋಗದ ವರದಿಗೆ ವಿರೋಧ ಮಾಡುತ್ತಿದ್ದಾರೆ. ರಾಹುಲ್ ಗಾಂಧಿಯವರಿಗೆ ಅನೇಕ ಭಾರಿ ನಾನೇ ಸದಾಶಿವ ವರದಿಯನ್ನ ಜಾರಿ ಮಾಡುವಂತೆ ಮನವಿ ಮಾಡಿದ್ದೇನೆ ಅವರು ಕೂಡ ನಮ್ಮ ಸಮುದಾಯಕ್ಕೆ ಸ್ಪಂದಿಸಿಲ್ಲ. ಕಾಂಗ್ರೆಸ್ ಪಕ್ಷ ಯಾವುದೇ ಕಾರಣಕ್ಕೂ ಕೇಂದ್ರದಲ್ಲಿ ಅಧಿಕಾರಕ್ಕೆ ಬರಲು ಬಿಡಬಾರದು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಅಂದ್ರದಲ್ಲಿ ನಡೆದ ನಮ್ಮ ಸಮುದಾಯದ ಸಮಾವೇಶದಲ್ಲಿ ಮಾತು ಕೊಟ್ಟಿದ್ದಾರೆ. ಈ



ಬಾರಿ ನಮ್ಮ ಸಮುದಾಯದವರು ಬಿಜೆಪಿ ಪಕ್ಷಕ್ಕೆ ನೀಡಿ ಮತ್ತೆ ನರೇಂದ್ರ ಮೋದಿಯವರನ್ನ ಪ್ರಧಾನಮಂತ್ರಿ ಮಾಡಿದಾಗ ಮಾತ್ರ ನಮ್ಮ ಸಮುದಾಯಕ್ಕೆ ನ್ಯಾಯ ದೊರಕಿಸಿಕೊಡುತ್ತಾರೆ ಎಂದು ಹೇಳಿದರು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗ ಭಲವಾದ ಸಮುದಾಯದ ಡಾ.ಜಿ.ಪರಮೇಶ್ವರ್ ಅವರನ್ನ ಡಿಸಿಎಂ ಮಾಡಿದ್ದಾರೆ. ಅದೆ ಬಿಜೆಪಿ ಸರಕಾರ ಅಧಿಕಾರ ಬಂದಾಗ ನಮ್ಮ ಸಮುದಾಯದ ಗೋವಿಂದಕರಜೋಳ ಅವರನ್ನ ಡಿಸಿಎಂ ಮಾಡಿದ್ದಾರೆ. ರಾಜ್ಯದಲ್ಲಿ ಸೇರಿದಂತೆ ಕೇಂದ್ರ ದಲ್ಲಿಯೂ ಸಹ ನಮ್ಮ ವಾಲ್ಮೀಕಿ ಸಮುದಾಯಕ್ಕೆ ಕಾಂಗ್ರೆಸ್ ಪಕ್ಷದಿಂದ ಅನ್ಯಾಯ ಮಾಡಿಕೊಂಡು ಬರುತ್ತಿದೆ ಅಂತವರ ವಿರುದ್ಧ ಹೋರಾಟ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-5 | 20-04-2024

ಹಾಸನ-ರಾಮನಗರ

ಮತದಾನ ಜಾಗೃತಿ ಕುರಿತು ಪಂಜಿನ ಮೆರವಣಿಗೆ

ರಾಮನಗರ: ಚನ್ನಪಟ್ಟಣ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಲೋಕಸಭೆ ಚುನಾವಣೆ-2024ರ ಅಂಗವಾಗಿ ಏ. 18ರ ಗುರುವಾರ ಪಂಜಿನ ಮೆರವಣಿಗೆ ನಡೆಸಲಾಯಿತು.

ಪಂಜಿನ ಮೆರವಣಿಗೆಯನ್ನು ಚನ್ನಪಟ್ಟಣ ನಗರಸಭೆಯಿಂದ ಪ್ರಾರಂಭಿಸಿ ಪೇಟೆ ಬೀದಿ ಸರ್ಕಲ್‌ನಲ್ಲಿ ಮಾನವ ಸರಪಳಿ ನಿರ್ಮಿಸಿ ಮತದಾನಕ್ಕಿಂತ ಇನ್ನೊಂದಿಲ್ಲ ನಾನು ಖಚಿತವಾಗಿ ಮತದಾನ ಮಾಡುವೆ ಎಂಬ ಘೋಷವಾಕ್ಯ ಮೊಳಗುವುದರ ಮೂಲಕ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮನು ಬಿ.ಕೆ, ನಗರಸಭೆ ಪೌರಾಯುಕ್ತರಾದ ಪುಟ್ಟಸ್ವಾಮಿ, ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ಸಿದ್ದರಾಜು, ವ್ಯವಸ್ಥಾಪಕರು, ಎನ್‌ಆರ್‌ಎಲ್‌ಎಂ



ಸಿಬ್ಬಂದಿ ಹರೀಶ್ ಬಾಬು, ಹೇಮಂತ್, ತಾಲ್ಲೂಕು ಐಇಸಿ ಭವ್ಯ, ನಗರಸಭೆ ಪೌರ ಕಾರ್ಮಿಕರು ಹಾಗೂ ಇತರರು ಭಾಗಿಯಾಗಿದ್ದರು.

ಕನಕಪುರದಲ್ಲಿ ಜನ ಬದಲಾವಣೆ ಬಯಸಿದ್ದಾರೆ

■ ಕಾಯಕಯೋಗಿ ಸುದ್ದಿ

ಕನಕಪುರ : ಕನಕಪುರದಲ್ಲಿ ಜನ ಬದಲಾವಣೆ ಬಯಸಿದ್ದಾರೆ, ಕ್ಷೇತ್ರದಲ್ಲಿನ ಪ್ರತಿಯೊಂದು ಮತದಾರರನ್ನು ಸಂಪರ್ಕಿಸುತ್ತಿದ್ದು ಅವರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಬಿಜೆಪಿ ಜೆಡಿಎಸ್ ಮೈತ್ರಿ ಕೂಟದ ಅಭ್ಯರ್ಥಿ ಡಾಕ್ಟರ್ ಸಿ.ಎನ್. ಮಂಜುನಾಥ್ ಧರ್ಮಪತ್ನಿ ಅನುಸೂಯ ಆಶಯ ವ್ಯಕ್ತಪಡಿಸಿದರು.

ಶುಕ್ರವಾರ ನಗರದ ಶಕ್ತಿ ದೇವತೆ ಕೆಂಕೇರಮ್ಮ ದೇವಾಲಯಕ್ಕೆ ಆಗಮಿಸಿ ದೇವರಿಗೆ ಪೂಜೆ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಎನ್‌ಡಿಎ ಮೈತ್ರಿಕೂಟದ ಸಹಸ್ರಾರು ಕಾರ್ಯಕರ್ತರು ಹಾಗೂ ಮುಖಂಡರು ಹಗಲಿರುಳೆನ್ನದೆ ಪಕ್ಷದ ಅಭ್ಯರ್ಥಿ ಪರ ಪ್ರಚಾರ ಕೈಗೊಳ್ಳಲಿದ್ದಾರೆ. ಕೇಂದ್ರದಲ್ಲಿನ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅಭಿವೃದ್ಧಿ ಕೆಲಸಗಳನ್ನು ಮತದಾರರಿಗೆ ಮನವರಿಕೆ ಮಾಡಿ ಮತಯಾಚನೆ ಮಾಡುತ್ತಿದ್ದಾರೆ. ಜನರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿರುವ ವಿಶ್ವಾಸ ವ್ಯಕ್ತಪಡಿಸಿದರು.



ನಂತರ ನಗರದ ವಿವಿಧ ಬಡಾವಣೆಗಳಲ್ಲಿ ಪಾದಯಾತ್ರೆ ಮೂಲಕ ಮನೆಮನೆಗೆ ತೆರಳಿ ಮತಪ್ರಚಾರ ಕೈಗೊಂಡಿದರು. ಈ ಸಂದರ್ಭದಲ್ಲಿ ರಾಜ್ಯ ಜೆಡಿಎಸ್ ಯುವ ಉಪಾಧ್ಯಕ್ಷ ಚೆನ್ನಸ್ವಾಮಿ, ತಾಲ್ಲೂಕು ಜೆಡಿಎಸ್ ಅಧ್ಯಕ್ಷ ನಾಗರಾಜು ನಗರಸಭಾ ಸದಸ್ಯರಾದ ಕುರುಪೇಟೆ ಲೋಕೇಶ್, ಸ್ಟುಡಿಯೋ ಚಿಂದ್ರು, ಮಾಲತಿ ಆನಂದ ಪೈ, ಮಾಜಿ ಸದಸ್ಯ ಪುಟ್ಟರಾಜು, ಗ್ರಾಮಾಂತರ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ನಾಗಾನಂದ, ನಗರಾಧ್ಯಕ್ಷ ಮಂಜುನಾಥ್, ಜೆಡಿಎಸ್ ಮಹಿಳಾ ಅಧ್ಯಕ್ಷೆ ಶೋಭಾ, ಬಿಜೆಪಿ ಮಹಿಳಾ ಅಧ್ಯಕ್ಷೆ ಪವಿತ್ರ ಪ್ರಮೀಳ , ಶ್ರೀವಳ್ಳಿ, ರೂಪ, ಮಮತ, ಮುಖಂಡರುಗಳಾದ ಗೀತಾ ನಾಗರಾಜು, ಸ್ಟುಡಿಯೋ ಸಿದ್ದು, ತಮ್ಮಣ್ಣ, ಸುರೇಶ್, ನಾಗರಾಜು, ಹರೀಶ, ಗುಂಡ ,ಮಿಮ್ಮರಾಜು , ಗುರು, ಸರ್ದಾರ್ ಖಾನ್, ಕೆ.ಆರ್. ಚಂದ್ರಶೇಖರ್ ಸೇರಿದಂತೆ ನೂರಾರು ಮುಖಂಡರು ಕಾರ್ಯಕರ್ತರು ಪ್ರಚಾರದಲ್ಲಿ ಭಾಗಿಯಾಗಿದ್ದರು.

ಇಂದಿನಿಂದ ಸಮೀಕ್ಷೆ ಫಲಿತಾಂಶಕ್ಕೆ ನಿರ್ಬಂಧ

■ ಕಾಯಕಯೋಗಿ ಸುದ್ದಿ

ರಾಮನಗರ : ಲೋಕಸಭೆಗೆ ನಡೆಯುತ್ತಿರುವ 2024 ರ ಸಾರ್ವತ್ರಿಕ ಚುನಾವಣೆಯ ಸಂಬಂಧ ದಿನಾಂಕ:19.04.2024 ರ ಬೆಳಿಗ್ಗೆ 7 ಗಂಟೆಯಿಂದ ದಿನಾಂಕ:01.06.2024 ರ ಸಂಜೆ 6.30 ಗಂಟೆಯ ನಡುವಿನ ಅವಧಿಯಲ್ಲಿ ಯಾವುದೇ ಮಾಧ್ಯಮದಲ್ಲಿ ಮತದಾನಕ್ಕೆ ಸಂಬಂಧಪಟ್ಟ ಅಭಿಪ್ರಾಯದ ಸಮೀಕ್ಷೆಗಳು ಸೇರಿದಂತೆ ಚುನಾವಣೆಗೆ ಸಂಬಂಧಪಟ್ಟ ಯಾವುದೇ ಸಮೀಕ್ಷೆಯ ಫಲಿತಾಂಶವನ್ನು ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಪತ್ರಿಕೆಗಳಲ್ಲಿ ಅಥವಾ ಬೇರೆ ಯಾವುದೇ ಮಾಧ್ಯಮಗಳ ಮೂಲಕ ಪ್ರಸಾರ ಮಾಡುವುದನ್ನು ನಿರ್ಬಂಧಿಸಲಾಗಿದೆ ಎಂದು ಭಾರತ ಚುನಾವಣೆ ಆಯೋಗವು ತಿಳಿಸಿದೆ.

ಗ್ರಾಹಕರ ಕುಂದು ಕೊರತೆ ಸಭೆ

■ ಕಾಯಕಯೋಗಿ ಸುದ್ದಿ

ರಾಮನಗರ: ಬೆಸ್ಕಾಂ ವತಿಯಿಂದ ಇದೇ ಏ. 20ರ ಶನಿವಾರ ಮಧ್ಯಾಹ್ನ 3 ಗಂಟೆಗೆ ಗ್ರಾಹಕರ ಕುಂದು ಕೊರತೆ ಸಭೆಯನ್ನು ರಾಮನಗರ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ಏ) ಕಚೇರಿಯಲ್ಲಿ ಏರ್ಪಡಿಸಲಾಗಿದೆ.

ರಾಮನಗರ ನಗರ ಉಪವಿಭಾಗದ ವ್ಯಾಪ್ತಿಗೆ ಒಳಪಡುವ ಸಾರ್ವಜನಿಕರು/ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳುವಂತೆ ರಾಮನಗರ ನಗರ ಉಪವಿಭಾಗದ ಸಹಾಯಕ ಕಾರ್ಯನಿರ್ವಹಕ ಇಂಜಿನಿಯರ್ (ಏ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸೈಕಲ್ ಜಾಥಕ್ಕೆ ಚಾಲನೆ



■ ಕಾಯಕಯೋಗಿ ಸುದ್ದಿ

ಹಾಸನ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಸ್ಕೌಟ್ಸ್ ಅಂಡ್ ಗೈಡ್ಸ್ ಯುವಕರಿಂದ ಸೈಕಲ್ ಜಾಥ ಮೂಲಕ ಮತದಾನ ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಸ್ವೀಪ್ ಸಮಿತಿ ಮುಖ್ಯಸ್ಥರು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಬಿ.ಆರ್. ಪೂರ್ಣಿಮ ರವರು ಕಾರ್ಯಕ್ರಮದಲ್ಲಿ ಉದ್ಘಾಟಿಸಿ ಮಾತನಾಡಿದ ಅವರು ಪ್ರತಿಯೊಬ್ಬರೂ ಯಾವುದೇ ಆಸೆ, ಆಮಿ?ಗಳಿಗೆ ಒಳಗಾಗದೆ ಮತ ಚಲಾವಣೆ ಮಾಡಬೇಕು. ಜಿಲ್ಲೆಯಲ್ಲಿ ಈ ಬಾರಿ ಶೇಕಡಾ 100 ರ?ು ಮತ ಚಲಾವಣೆಯಾಗಬೇಕೆಂದು ಸಾರ್ವಜನಿಕರಲ್ಲಿ ಕೋರಿದರು.

ಮತದಾನದ ದಿನ ಮತಗಟ್ಟೆಗಳಲ್ಲಿ ದೊರೆಯುವ ವಿಶೇ? ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಪರಪ್ಪಸ್ವಾಮಿ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ನಾಗೇಶ್ ರಾಯ್ಕರ್, ಜಿಲ್ಲಾ ಪಂಚಾಯಿತಿ ಸಹಾಯಕ ಕಾರ್ಯದರ್ಶಿ ಹರೀಶ್, ಸ್ಕೌಟ್ಸ್ ಅಂಡ್ ಗೈಡ್ಸ್ ಗಿರೀಶ್ ಮತ್ತಿತರರು ಉಪಸ್ಥಿತರಿದ್ದರು.

ಸ್ವೀಪ್/ಕಾನೂನು ಅರಿವು ಕಾರ್ಯಕ್ರಮ

■ ಕಾಯಕಯೋಗಿ ಸುದ್ದಿ

ರಾಮನಗರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಸಹಯೋಗದೊಂದಿಗೆ ಇಂದು (ಏ. 19) ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಹಾಗೂ ದಮನಿತ ಮಹಿಳೆಯರಿಗೆ ಸ್ವೀಪ್ ಕಾರ್ಯಕ್ರಮ ಮತ್ತು ಕಾನೂನು ಅರಿವು ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅನಿತಾ ಎನ್.ಪಿ ಅವರು ಉದ್ಘಾಟಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಿಗ್ವಿಜಯ್ ಬೋಡ್ಕೆ ಯೋಜನಾ ನಿರ್ದೇಶಕರಾದ ಮಂಜುನಾಥ ಸ್ವಾಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಬಿ. ಬಸವರಾಜು, ಗಾಯಿತ್ರಿ ದೇವಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಾಮಾನ್ಯ ವೆಚ್ಚ ವೀಕ್ಷಕರ ಭೇಟಿ

ರಾಮನಗರ: ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಸಂಬಂಧ 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಾಮಾನ್ಯ ವೆಚ್ಚ ವೀಕ್ಷಕರಾದ ಅಭಯ್ ಕುಮಾರ್ ಅವರು ಇಂದು (ಏ. 19) ಕುಣಿಗಲ್ ತಾಲ್ಲೂಕಿನ ಸೂಕ್ಷ್ಮ ಹಾಗೂ ಅತಿ ಸೂಕ್ಷ್ಮ ಮತಗಟ್ಟೆಗಳಾದ ಮುನಿಯಪ್ಪನ ಪಾಳ್ಯ ಸಂತೆ ಮಾವಮ್ಮರು ಹಾಗೂ ಮೋದೂರು ಮತಗಟ್ಟೆಗಳಿಗೆ ಭೇಟಿ ನೀಡಿ ಸ್ಥಳೀಯ ಮತದಾರರ ಅಭಿಪ್ರಾಯವನ್ನು ಪಡೆದರು.

ಸೆಲ್ಫಿ ವಿತ್ ವೋಟಿಂಗ್- ಸಹಿ ಸಂಗ್ರಹ ಅಭಿಯಾನಕ್ಕೆ ಚಾಲನೆ

ರಾಮನಗರ: ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಆಯೋಜಿಸಲಾಗಿದ್ದ ಸೆಲ್ಫಿ ವಿತ್ ವೋಟಿಂಗ್ ಮತ್ತು ಸಹಿ ಸಂಗ್ರಹ ಅಭಿಯಾನಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಅವರು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಡಾ.ಮಂಜುನಾಥ್ ಪರ ಮತಯಾಚನೆ

■ ಕಾಯಕಯೋಗಿ ಸುದ್ದಿ

ಕನಕಪುರ : ಬಿಜೆಪಿ ಮೀನುಗಾರರ ಪ್ರಕೋಷ್ಠ ರಾಜ್ಯ ಸಂಚಾಲಕರಾದ ಹೆಚ್. ಸಿ .ಮುನಿರಾಜು ರವರ ನೇತೃತ್ವದಲ್ಲಿ ಏರಿಂ ಧ್ಯಾಪನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ. ಕೂಮೇಗೌಡನ ದೊಡ್ಡಿ , ಗುಳಿನಹಳ್ಳಿ , ತಿಪ್ಪೂರು , ತಟ್ಟಗುಪ್ಪೆ , ಬೊಮ್ಮಸಂದ್ರ ಗ್ರಾಮಗಳಲ್ಲಿ ಎನ್‌ಡಿಎ ಅಭ್ಯರ್ಥಿ ಡಾ.ಮಂಜುನಾಥ್ ಪರ ಮತಯಾಚನೆ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೋದಿ ಅವರ ನಾಯಕತ್ವ ಹಾಗೂ ಡಾ.ಮಂಜುನಾಥ್ ಅವರ ವ್ಯಕ್ತಿತ್ವಕ್ಕೆ ಮಾರುಹೋಗಿರುವ ಮತದಾರರು ಮತ ಚಲಾಯಿಸಲು ಕಾತುರದಿಂದ ಕಾಯುತ್ತಿದ್ದು, ಕನಿಷ್ಠ 1.50 ಲಕ್ಷ ಮತಗಳಿಂದ ಬಿಜೆಪಿ ಜಯಗಳಿಸಲಿದೆ ಎಂದು ಭವಿಷ್ಯ ನುಡಿದರು.



ಕಳೆದ 10 ವರ್ಷಗಳಲ್ಲಿ ದೇಶದ ಅಭಿವೃದ್ಧಿಯ ಕಡೆ ಕೊಂಡೊಯ್ಯುತ್ತಿರುವ ನರೇಂದ್ರ ಮೋದಿ ದೇಶದ ರೈತರಿಗೆ ಆರ್ಥಿಕ ಬೆಂಬಲ ನೀಡುವ ಸಲುವಾಗಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ ಮೂಲಕ ಪ್ರತಿ ರೈತರಿಗೆ ವಾರ್ಷಿಕ ಆರು ಸಾವಿರ ರೂಪಾಯಿ ನೀಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ರೈತರ ಸಂಖ್ಯೆಯನ್ನು 18 ಸಾವಿರಕ್ಕೆ ಏರಿಕೆ ಮಾಡುವ ಸಂಕಲ್ಪ ಕೈಗೊಳ್ಳಲಾಗಿದೆ ಎಂದರು.

ರಾಜ್ಯದಲ್ಲಿ ಬಿಜೆಪಿ ಸರ್ಕಾರ ಇದ್ದಾಗ 6 ಸಾವಿರದ ಜತೆಗೆ 4 ಸಾವಿರ ನೀಡಲಾಗುತ್ತಿತ್ತು. ಆದರೆ, ರೈತ ವಿರೋಧಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ 4 ಸಾವಿರ ನೀಡುವುದನ್ನು ರದ್ದುಪಡಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ರಾಮನಗರ ಜಿಲ್ಲಾ ಜೆಡಿಎ ಮೋರ್ಚಾ ಜಿಲ್ಲಾ ಉಪಾಧ್ಯಕ್ಷ ಪುಟ್ಟರಾಜು , ಜೆಡಿಎಸ್ ಮುಖಂಡ ಬಾಲನರಸಿಂಹೇಗೌಡ , ಜೆಡಿಎಸ್ ಕಾರ್ಯಕರ್ತರಾದ ವೆಂಕಟೇಶ್, ಭರತ್, ಜೈಕುಮಾರ್, ಗಿರೀಶ್, ಚಿಕ್ಕ ರಾಜು ,ಇನ್ನು ಹಲವಾರು ಪರಿದ್ಯಾಪನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸೇರಿದ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಮತ್ತು ಮುಖಂಡರು ಉಪಸ್ಥಿತರಿದ್ದರು

ವಕೀಲರ ಮತಬೇಟೆ ನಡೆಸುತ್ತಿರುವ ಮಾಜಿ ಕಾನೂನು ಸಚಿವ ಸುರೇಶ್ ಕುಮಾರ್

ಚಾಮರಾಜನಗರ: ರಾಜಕಾರಣಕ್ಕೂ ಮುನ್ನ ವಕೀಲ ವೃತ್ತಿಯಲ್ಲಿದ್ದ ಮಾಜಿ ಕಾನೂನು ಸಚಿವ ಸುರೇಶ್ ಕುಮಾರ್ ಲೋಕಸಭಾ ಚುನಾವಣೆಯಲ್ಲಿ ವಕೀಲರ ಮತ ಬೇಟೆಗೆ ಇಳಿದಿದ್ದಾರೆ.

ಚಾಮರಾಜನಗರ ಜಿಲ್ಲೆಯ ಚಾಮರಾಜನಗರ, ಗುಂಡ್ಲುಪೇಟೆಯಲ್ಲಿ ವಕೀಲರ ಪರ ಮತಯಾಚಿಸಿದ ಸುರೇಶ್ ಕುಮಾರ್ ಅವರು, ಈ ಲೋಕಸಭಾ ಚುನಾವಣೆ ನಿರ್ಣಾಯಕ ಚುನಾವಣೆಯಾಗಿದೆ, ನಾನು ವಕೀಲರ ಸಂಘಗಳಿಗೆ ತೆರಳಿ ಮತಯಾಚನೆ ನಡೆಸುತ್ತಿದ್ದು, ಬಿಜೆಪಿಗೆ ಉತ್ತಮ ವಾತಾವರಣ ಇದೆ ಎಂದರು.

ಬಿಜೆಪಿ ಬಂದರೆ ಸಂವಿಧಾನ ಬದಲು ಮಾಡುತ್ತಾರೆ ಎಂದು ಅಪಪ್ರಚಾರ ಮಾಡಲಾಗುತ್ತಿದೆ. ತುರ್ತು ಪರಿಸ್ಥಿತಿ ಹೇರಿ ಸಂವಿಧಾನಕ್ಕೆ ಯಾರು ಅಪಚಾರ ಎಸಗಿದರೋ ಅವರೇ ಈಗ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಕಾಂಗ್ರೆಸ್ ವಿರುದ್ಧ ಕಿಡಿಕಾರಿದರು.



ಈಗಾಗಲೇ ನರೇಂದ್ರ ಮೋದಿ ಅವರಿ ಹೇಳ್ದಾರೆ ಸ್ವತಃ ಅಂಬೇಡ್ಕರ್ ಅವರಿಂದಲೂ ಈಗ ಸಂವಿಧಾನ ಬದಲು ಮಾಡಲು ಸಾಧ್ಯವಿಲ್ಲವೆಂದು. ಭಾರತದ ಸಂವಿಧಾನ ರಾಷ್ಟ್ರದ ಗ್ರಂಥವಾಗಿದೆ ನಿರ್ಣಾಯಕ ಚುನಾವಣೆಯಲ್ಲಿ ಪ್ರಜ್ಞಾವಂತರಾದ ವಕೀಲರು ಬಿಜೆಪಿ ಬೆಂಬಲಿಸಬೇಕು ಎಂದು ಕೋರಿದರು.

ಕಾಂಗ್ರೆಸ್ ಅಭ್ಯರ್ಥಿ ಬಗೆಗಿನ ದೂರಿನ ಬಗ್ಗೆ ಚುನಾವಣಾಧಿಕಾರಿ-ಡಿಸಿ ಸ್ಪಷ್ಟನೆ

■ ಕಾಯಕಯೋಗಿ ಸುದ್ದಿ

ಚಾಮರಾಜನಗರ:- ಪ್ರಜಾ ಪ್ರಾತಿನಿಧ್ಯ ಅಧಿನಿಯಮ 1951ರ ಅಡಿಯಲ್ಲಿ ಮಾರ್ಗಸೂಚಿಗಳ ಪ್ರಕಾರ ಚಾಮರಾಜನಗರ ಲೋಕಸಭಾ ಕ್ಷೇತ್ರವ್ಯಾಪ್ತಿಗೆ ಸಂಬಂಧಿಸಿದಂತೆ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಶ್ರೀ ಸುನಿಲ್ ಬೋಸ್ ಅವರು ಸಲ್ಲಿಸಿದ ನಮೂನೆ 26 ರಲ್ಲಿನ ಅಫಿಡವಿಟ್‌ಗೆ ಸಂಬಂಧಿಸಿದಂತೆ ರಿಟರ್ನಿಂಗ್ ಆಫೀಸರ್ ಯಾವುದೇ ಕಾಲಂ ಖಾಲಿ ಉಳಿದಿಲ್ಲ ಎಂದು ಖಚಿತಪಡಿಸಿಕೊಂಡು ನಾಮಪತ್ರವನ್ನು ಅಂಗೀಕರಿಸಲಾಗಿರುತ್ತದೆ. ಸದರಿಯವರ ನಾಮಪತ್ರದ ಬಗ್ಗೆ ಆಕ್ಷೇಪಣೆಗೆ ಸಂಬಂಧಿಸಿದಂತೆ ಯಾವುದೇ ಕೌಂಟರ್-ಅಫಿಡವಿಟ್ ಅನ್ನು ದೂರುದಾರರು ಪರಿಶೀಲನೆಯ ದಿನದಂದು ಅಥವಾ ಅದರ ಮೊದಲು ಸಲ್ಲಿಸಿರುವುದಿಲ್ಲ ಎಂದು ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

ಅಭ್ಯರ್ಥಿಯೋರ್ವರಾದ ಸಿ.ಎಂ.ಕೃಷ್ಣ ರವರು ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಸುನೀಲ್ ಬೋಸ್ ರವರು ನಾಮಪತ್ರ ಸಲ್ಲಿಸುವಾಗ ಹೆಂಡತಿ, ಮಕ್ಕಳ ಬಗ್ಗೆ ಮಾಹಿತಿ ಮರೆಮಾಚಿದ್ದು, ಕೂಡಲೇ ಇವರ ವಿರುದ್ಧ ಕ್ರಮ ಜರುಗಿಸಿ ಬ್ಯಾಲೆಟ್ ಪೇಪರ್ ನಿಂದ ಸುನೀಲ್ ಬೋಸ್ ರವರನ್ನು ತೆಗೆದು ಹಾಕಬೇಕು ಎಂದು ಸುದ್ದಿಗೋಷ್ಠಿ ನಡೆಸಿರುತ್ತಾರೆ.

ನಾಮನಿರ್ದೇಶನ ಪ್ರಕ್ರಿಯೆಯಲ್ಲಿ ಯಾವುದೇ ಅಭ್ಯರ್ಥಿಯು ಸಲ್ಲಿಸಿದ ಅಫಿಡವಿಟ್‌ನ ಸತ್ಯಾಸತ್ಯತೆಯನ್ನು ಖಚಿತಪಡಿಸಿಕೊಳ್ಳುವುದು ಚುನಾವಣಾಧಿಕಾರಿಯ ವ್ಯಾಪ್ತಿಯಲ್ಲಿರುವುದಿಲ್ಲ. ಈ ನಿಟ್ಟಿನಲ್ಲಿ ಸಕ್ಷಮ ಪ್ರಾಧಿಕಾರವನ್ನು ಸಂಪರ್ಕಿಸಬಹುದಾಗಿರುತ್ತದೆ.

ಚುನಾವಣಾಧಿಕಾರಿಗಳ ಆಂಗ್ಲಭಾಷೆಯ ಕೈಪಿಡಿಯ 2023ರ 2ನೇ ಆವೃತ್ತಿಯ ಅಧ್ಯಾಯ ಸಂಖ್ಯೆ 5.16.1 ರಂತೆ ನಾಮಪತ್ರದ ಜೊತೆಗೆ ಪ್ರತಿ ಅಭ್ಯರ್ಥಿಯು ಕ್ರಿಮಿನಲ್ ಪ್ರಕರಣಗಳು, ಆಸ್ತಿಗಳು, ಹೊಣೆಗಾರಿಕೆಗಳು ಮತ್ತು ಶೈಕ್ಷಣಿಕ ಅರ್ಹತೆಗಳ ಬಗ್ಗೆ ಮಾಹಿತಿಯನ್ನು ಘೋಷಿಸುವ ಫಾರ್ಮ್ 26 (2019 ರಲ್ಲಿ ನವೀಕರಿಸಲಾಗಿದೆ) ನಲ್ಲಿ ಅಫಿಡವಿಟ್ ಅನ್ನು ಸಲ್ಲಿಸುವ ಅಗತ್ಯವಿದೆ. ನಮೂನೆ 26 ರಲ್ಲಿನ ಅಫಿಡವಿಟ್ ಅನ್ನು ಪ್ರಥಮ ದರ್ಜೆಯ ಮ್ಯಾಜಿಸ್ಟ್ರೇಟ್ ಅಥವಾ ನೋಟರಿ ಪಬ್ಲಿಕ್ ಅಥವಾ ಸಂಬಂಧಪಟ್ಟ ರಾಜ್ಯದ ಉಚ್ಚ ನ್ಯಾಯಾಲಯವು ನೇಮಿಸಿದ ಪ್ರಮಾಣ ಕಮಿಷನರ್ ಅವರ ಮುಂದೆ ಪ್ರಮಾಣ ಮಾಡಬೇಕು. ಅಫಿಡವಿಟ್‌ನ ಪ್ರತಿಯೊಂದು ಪುಟಕ್ಕೂ ಸಂಬಂಧಪಟ್ಟ ಹೇಳಿಕೆದಾರರು ಸಹಿ ಮಾಡಬೇಕು ಅಥವಾ ಪ್ರತಿ ಪುಟದಲ್ಲಿ ಅಫಿಡವಿಟ್ ಪ್ರಮಾಣ ವಚನ ಸ್ವೀಕರಿಸಿದ ನೋಟರಿ/ಓಥ್ ಕಮಿಷನರ್/ ಮ್ಯಾಜಿಸ್ಟ್ರೇಟ್ ಅವರ ಮುದ್ರೆಯನ್ನು ಹೊಂದಿರಬೇಕು. ಕ್ರಮಬದ್ಧವಾಗಿ ಪ್ರಮಾಣ ವಚನ ಸ್ವೀಕರಿಸಿದ ಅಫಿಡವಿಟ್‌ಗಳು ಸಂಬಂಧಪಟ್ಟ ರಾಜ್ಯದ ಕಾನೂನಿನ ಅಡಿಯಲ್ಲಿ ಸೂಚಿಸಿದಂತೆ ಅಂತಹ ಪಂಗಡದ ಸ್ಟಾಂಪ್ ಪೇಪರ್‌ನಲ್ಲಿರಬೇಕು.

ಚುನಾವಣಾಧಿಕಾರಿಗಳ ಆಂಗ್ಲಭಾಷೆಯ ಕೈಪ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ-6
20-04-2024
ಬೆಂಗಳೂರು

ಜಗಳ ಬಿಡಿಸಲು ಬಂದ ಪೊಲೀಸ್ ವಾಹನದ ಮೇಲೆ ಕಲ್ಲು ತೂರಾಟ ಗರುಡಾ ವಾಹನ ಗಾಜು ಪುಡಿ: 15 ಮಂದಿ ಬಂಧನ

ಮೈಸೂರು; ಎರಡು ಗುಂಪುಗಳ ನಡುವೆ ನಡೆಯುತ್ತಿದ್ದ ಗಲಾಟೆಯನ್ನು ನಿಯಂತ್ರಿಸಲು ಬಂದ ಪೊಲೀಸ್ ವಾಹನದ ಮೇಲೆ ಕಲ್ಲುತೂರಾಡಿದ ಘಟನೆ ಮೈಸೂರಿನ ಬಿ.ಎಂ.ಶ್ರೀ ನಗರದ ಬಡಾವಣೆಯಲ್ಲಿ ನಡೆದಿದೆ. ಘಟನೆಯಲ್ಲಿ ಗರುಡಾ ವಾಹನದ ಗಾಜು ಪುಡಿಪುಡಿಯಾಗಿದೆ.ಘಟನೆಗೆ ಸಂಬಂಧಿಸಿದಂತೆ ಮೇಟಗಳ್ಳಿ ಠಾಣೆ ಪೊಲೀಸರು 15 ಮಂದಿಯನ್ನ ಬಂಧಿಸಿದ್ದಾರೆ.

ಬಿಎಂ ಶ್ರೀ ನಗರದ ಚರ್ಚ್ ಬಳಿ ಕ್ಷುಲ್ಲಕ ಕಾರಣಕ್ಕೆ ಜಾನ್ ಪೀಟರ್ ಎಂಬಾತನ ಪುತ್ರ ಹಾಗೂ ಹುಸೇನ್ ಎಂಬುವರ ಪುತ್ರರ ನಡುವೆ ಗಲಾಟೆಯಾಗುತ್ತಿತ್ತು. ಸ್ಥಳಕ್ಕೆ ಬಂದ ಹುಸೇನ್ ಮೇಲೆ ಜಾನ್ ಪೀಟರ್ ಮಚ್ಚಿನಿಂದ ಹಲ್ಲೆ ನಡೆಸಿದ್ದಾನೆ. ಈ ಬೆಳವಣಿಗೆ ನಂತರ ಕೆಲಸಮಯದಲ್ಲೇ ಹುಸೇನ್ ಹಾಗೂ ಕುಟುಂಬಸ್ಥರು ಸೇರಿದಂತೆ 15 ಮಂದಿ ಜಾನ್ ಪೀಟರ್ ಮನೆಗೆ ನುಗ್ಗಿ ಸಾಮಗ್ರಿಗಳನ್ನ ನಾಶಗೊಳಿಸಿದ್ದಾರೆ.ಮಾಹಿತಿ ಅರಿತ 112 ಗರುಡಾ ಪೊಲೀಸರು ಸ್ಥಳಕ್ಕೆ ಬಂದು ಪರಿಸ್ಥಿತಿಯನ್ನು ತಿಳಿಗೊಳಿಸಿದ್ದಾರೆ. ಈ ವೇಳೆ ಹುಸೇನ್ ಸೇರಿದಂತೆ ಕೆಲವರನ್ನ ಪೊಲೀಸರು ಠಾಣೆಗೆ ಕರೆದೊಯ್ಯಲು ಮುಂದಾದಾಗ ಕೆರಳಿದ ಯುವಕರು ಗರುಡಾ ವಾಹನದ ಮೇಲೆ ಕಲ್ಲು ತೂರಿದ್ದಾರೆ. ಪರಿಣಾಮ ಗರುಡಾ ವಾಹನದ ಗಾಜು ಜಖಂ ಆಗಿದೆ.ಘಟನೆಗೆ ಸಂಭಂದಿಸಿದಂತೆ ಪೊಲೀಸರು ಹುಸೇನ್,ಸಾಯಿದಾ,ಆಸ್ಮಾ,ಹುಸೇನ್ ಬಿಜುಬೆದ,ಸಲ್ಮಾನ್,ಜಬೀವುಲ್ಲಾ,ಅಫ್ಜಲ್ ಹಾಗೂ ರಿಜ್ವಾನ್ ಸೇರಿದಂತೆ 15 ಮಂದಿ ವಿರುದ್ಧ ಮೇಟಗಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸ್ಥಳಕ್ಕೆ ಕಾನೂನು ಮತ್ತು ಸುವ್ಯವಸ್ಥೆ ಡಿಸಿಪಿ ರವರಾದ ಮುತ್ತುರಾಜ್, ವಿಜಯನಗರ ವಿಭಾಗದ ಎಸಿಪಿ ಗಜೇಂದ್ರ ಪ್ರಸಾದ್ ಮೇಟಗಳ್ಳಿ ಠಾಣೆಯ ಇನ್ಸ್ಪೆಕ್ಟರ್ ಶಾಂತರಾಮ್, ಪಿಎಸ್ಐ ಶಬರೀಶ್,ಜ್ಯೋತ್ಸ್ನಾರಾಜ್ ರವರು ಭೇಟಿ ನೀಡಿ ಪರಿಸ್ಥಿತಿಯನ್ನ ಹತೋಟಿಗೆ ತಂದಿದ್ದಾರೆ. ಸಿಬ್ಬಂದಿಗಳಾದ ಮಧುಸೂಧನ್, ಶ್ರೀಶೈಲ ಹುಗ್ಗಿ,ಶಿವಕುಮಾರ್, ನರೋನ, ಮಹದೇವ್, ಮಣಿ,ಅಭಿಜಿತ್ ಹಾಗೂ ಹರೀಶ್ ರವರು ಆರೋಪಿಗಳ ಬಂಧನ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದಾರೆ.

ಶ್ರೇಯಸ್ ಪಟೇಲ್ ಹಾಸನದಲ್ಲಿ ಒಂದು ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಗೆಲ್ತಾರೆ: ಸಿಎಂ



ಹಾಸನ (ಅರಕಲಗೋಡು) ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ ಹಾಸನ ಲೋಕಸಭಾ ಕ್ಷೇತ್ರದಲ್ಲಿ ಒಂದು ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಗೆಲ್ತಾರೆ ಎಂದು ಸಿಎಂಸಿದ್ದರಾಮಯ್ಯ ಭರವಸೆ ವ್ಯಕ್ತಪಡಿಸಿದರು.

ಹಾಸನ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶ್ರೇಯಸ್ ಪಟೇಲ್ ಪರವಾಗಿ ನಡೆದ ಪ್ರಜಾಧ್ವನಿ2 ಜನಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.

ಶ್ರೀಧರ್ ಗೌಡ ಮತ್ತು ಕೃಷ್ಣೇಗೌಡರು ಇಬ್ಬರೂ ಒಟ್ಟಾಗಿ ಸಮಾನ ಮನಸ್ಕರಾಗಿ ಕೆಲಸ ಮಾಡುತ್ತಿರುವುದು ಉತ್ತಮ ಬೆಳವಣಿಗೆ. ಇವರಿಬ್ಬರೂ ಒಟ್ಟಾಗಿ ಅರಕಲಗೋಡು ಕ್ಷೇತ್ರದಲ್ಲಿ 30 ಸಾವಿರಕ್ಕೂ ಅಧಿಕ ಮತಗಳ ಲೀಡ್ ಕೊಡಿಸುತ್ತಾರೆ ಎನ್ನುವ ಭರವಸೆ ನನಗಿದೆ ಎಂದರು.

ವಿಧಾನಸಭಾ ಚುನಾವಣೆ ವೇಳೆ ರಾಹುಲ್ ಗಾಂಧಿಯವರು ಜೆಡಿಎಸ್ ಪಕ್ಷವನ್ನು ಬಿಜೆಪಿಯ "ಬಿ" ಟೀಮ್ ಎಂದಿದ್ದರು. ಆಗ ದೇವೇಗೌಡರು ಈ ವಿಚಾರವನ್ನು ವಿರೋಧಿಸಿದ್ದರು. ಈಗ ಅದೇ ದೇವೇಗೌಡರು ಹೋಗಿ ಮೋದಿಯವರ ಜತೆ ಜಮೆಯಾಗಿದ್ದಾರೆ. ರಾಹುಲ್ ಗಾಂಧಿ ಅವರ ಮಾತನ್ನು ದೇವೇಗೌಡರು ಸಾಬೀತು ಮಾಡಿದ್ದಾರೆ ಎಂದರು.

ರಾಜ್ಯದ ಪರವಾಗಿ-ಹಾಸನ ಪರವಾಗಿ ಪ್ರಜ್ವಲ್ ರೇವಣ್ಣ ಬಾಯೇ ಬಿಡಲಿಲ್ಲ

ರಾಜ್ಯದ ಪರವಾಗಿ-ಹಾಸನ ಪರವಾಗಿ ಪ್ರಜ್ವಲ್ ರೇವಣ್ಣ ಪಾರ್ಲಿಮೆಂಟಿನಲ್ಲಿ ಬಾಯೇ ಬಿಡಲಿಲ್ಲ. ರಾಜ್ಯಕ್ಕೆ ಆಗುತ್ತಿರುವ ಅನ್ಯಾಯಗಳ ಬಗ್ಗೆ ಚಕಾರವನ್ನೇ ಎತ್ತಲಿಲ್ಲ. ಹೀಗಾಗಿ ಈ ಬಾರಿ ಇವರನ್ನು ಸೋಲಿಸಿ ರಾಜ್ಯದ ಪರವಾಗಿ ಧ್ವನಿ ಎತ್ತುವ ಸಾಮರ್ಥ್ಯ ಇರುವ ಶ್ರೇಯಸ್ ಪಟೇಲ್ ಅವರನ್ನು ಗೆಲ್ಲಿಸಿ ಎಂದು ಕರೆ ನೀಡಿದರು.

ರಾಜ್ಯದ ಪಾಲಿನ ತೆರಿಗೆ ಪಾಲನ್ನೂ ಕೇಂದ್ರ ಸರ್ಕಾರ ಕೊಡಲಿಲ್ಲ. ಬರಗಾಲ ಬಂದಿದ್ದರೂ ನಮ್ಮ ಪಾಲನ್ನು ಕೊಟ್ಟಿಲ್ಲ. ಹೀಗಾಗಿ ನರೇಂದ್ರ ಮೋದಿಯವರು ಮತ್ತು ಬಿಜೆಪಿಯವರು ಯಾವ ಮುಖ ಹೊತ್ಕೊಂಡು ರಾಜ್ಯದ ಜನರಿಂದ ಮತ ಕೇಳುತ್ತಿದ್ದೀರಿ ಎಂದು ಖಾರವಾಗಿ ಪ್ರಶ್ನಿಸಿದರು.

ಹಾಸನದಲ್ಲಿ ಬದಲಾವಣೆ ಆಗಬೇಕು. ಈ ಬಾರಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಿ ಎಂದು ಕರೆ ನೀಡಿದರು.

ಇಡಿ ದೇಶದ ರೈತರ ಸಾಲ ಮನ್ನಾ

ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಇಡೀ ದೇಶದ ರೈತರ ಸಾಲ ಮನ್ನಾ ಮಾಡಲಾಗುವುದು. ಮೋದಿಯವರ ಆತ್ಮೀಯ ಶ್ರೀಮಂತರ ಸಾಲವನ್ನು ಮಾತ್ರ ಮನ್ನಾ ಮಾಡಿದರು. ಆದರೆ ಕಾಂಗ್ರೆಸ್ ರೈತರ ಸಂಪೂರ್ಣ ಸಾಲ ಮನ್ನಾ ಮಾಡುತ್ತದೆ. ಮನಮೋಹನ್ ಸಿಂಗ್ ಅವರ ಪ್ರಧಾನಿಯಾಗಿದ್ದಾಗ ರೈತರ 76 ಸಾವಿರ ಕೋಟಿ ಸಾಲ ಮನ್ನಾ ಮಾಡಿದ್ದರು. ಈ ಬಾರಿ ಇದು ಮರುಕಳಿಸುತ್ತದೆ ಎಂದರು. ಹಾಗೆಯೇ ಮಹಿಳೆಯರ ಖಾತೆಗೆ ವರ್ಷಕ್ಕೆ 1 ಲಕ್ಷರೂಪಾಯಿ ಹಾಕುವುದೂ ಸೇರಿ 25 ಗ್ಯಾರಂಟಿಗಳನ್ನು ಕಾಂಗ್ರೆಸ್ ಘೋಷಿಸಿದೆ. ಇವೆಲ್ಲವನ್ನೂ ಜಾರಿ ಮಾಡುತ್ತೇವೆ ಎಂದು ಸ್ಪಷ್ಟಪಡಿಸಿದರು.

ಡಿಸಿಎಂ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ, ಶಾಸಕರಾದ ಶಿವಲಿಂಗೇಗೌಡರು, ರಾಜ್ಯಸಭಾ ಸದಸ್ಯ ಜಿ.ಸಿ.ಚಂದ್ರಶೇಖರ್ ಸೇರಿ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

ಮೋಡಿ ಮಾಡುತ್ತಿರುವ ಮೋದಿಯನ್ನು ಈ ಬಾರಿ ಮಾಯ ಮಾಡಬೇಕು: ಮಾಜಿ ಸಿಎಂ ವೀರಪ್ಪ ಮೊಯ್ಲಿ

■ ಕಾಯಕಯೋಗಿ ಸುದ್ದಿ



ದೇವನಹಳ್ಳಿ: ದೇಶದಲ್ಲಿ ಪ್ರಧಾನಿ ಮೋದಿ ಅವರು ಕೇವಲ ಅಬ್ಬರದ ಪ್ರಚಾರದ ಮೂಲಕ ಜನರಲ್ಲಿ ಮೋದಿಯವರು ಪ್ರಧಾನಿಯಾಗಲು ಬಿಟ್ಟರೆ ಅನ್ಯರು ಯಾರು ಅರ್ಹರಿಲ್ಲ ಎಂಬ ಭ್ರಮೆಯನ್ನು ಮೂಡಿಸುತ್ತಿದ್ದಾರೆ ,ಆರ್ಹರಿಗೆ ನಿಮ್ಮ ಮತದಾನದ ಮೂಲಕ ಮೋಡಿ ಮಾಡುತ್ತಿರುವ ಮೋದಿಯನ್ನು ಈ ಬಾರಿ ಮಾಯ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ಹೇಳಿದರು.


ದೇವನಹಳ್ಳಿ ತಾಲೂಕಿನ ಕನ್ನಮಂಗಲದ ಕಾಂಗ್ರೇಸ್ ಮುಖಂಡರಾದ ಕೆ.ಸಿ.ಮಂಜುನಾಥ್ ರವರ ನಿವಾಸದಲ್ಲಿ ನಡೆದ ಕಾಂಗ್ರೇಸ್ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾಲಂಬಿ ಪರವಾಗಿ ಮತಯಾಚಿಸಿ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ನೀಡಿದ ಗ್ಯಾರಂಟಿ ಯೋಜನೆಗಳು ಬಡವರಿಗೆ ಎನ್ಪಿ ಅನುಕೂಲವಾಗಿದೆ ಎಂದು ಜನರಿಗೆ ತಿಳಿದಿದೆ ಅದನ್ನು ಬಿಜೆಪಿಯವರು ಅವಹೇಳನ ಮಾಡುವ ಅವಶ್ಯಕತೆ ಇಲ್ಲ ಹಾಗೂ ಕಾಂಗ್ರೇಸ್ ಪಕ್ಷದ ಕುರಿತು ಮಾತಾನಾಡುವುದಕ್ಕೆ ವಿ?ಯ ಸಿಗದ ಕಾರಣ ಅವಪ್ರಚಾರ ಮಾಡುವುದೇ ಅವರ ಕೆಲಸ ಎಂದು ಹೀಯಾಳಿಸಿದರು.

ಸಚಿವ ಕೆ.ಎಚ್.ಮುನಿಯಪ್ಪ ಮಾತನಾಡಿ ರಾಜ್ಯದಲ್ಲಿ ಐದು ಗ್ಯಾರಂಟಿಗಳ ಯೋಜನೆ ಅನ್ಯೂನ ಗೊಳಿಸಿರುವ ಸಿದ್ದರಾಮಯ್ಯ ನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಜನರ ಆಶೋತ್ತರಗಳಿಗೆ ಸ್ಪಂದಿಸಿ ಗ್ಯಾರಂಟಿ ಯೋಜನೆಗಳನ್ನು ಈಡೇರಿಸಿದ್ದೇವೆ ಅದರಂತೆ ಕೇಂದ್ರದ ಗ್ಯಾರಂಟಿಗಳ ಉಪಯೋಗ ಪಡೆಯಬೇಕಾದರೆ ಕೇಂದ್ರದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಬೇಕು ಜೊತೆಯಲ್ಲಿ ನಮ್ಮ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಕ್ಷಾರಾಮಯ್ಯ ನವರಿಗೆ ನಿಮ್ಮೆಲ್ಲರ ಮತ ಹಾಕಿ ದೆಹಲಿಗೆ ಕಳಿಸುವ ಕೆಲಸ ಮಾಡಬೇಕೆದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಮುಖಂಡ ಕೆ.ಸಿ ಮಂಜುನಾಥ್ ಬದಲಾನಾಡಿ ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ನಂತರ ಗ್ಯಾರಂಟಿ ಯೋಜನೆ ಪಡೆದ ಅನುಕೂಲ ಪಡೆದಂತೆ ಕೇಂದ್ರದಿಂದಲೂ ಅನೇಕ ಯೋಜನೆಗಳ ಜನರಿಗೆ ತಲುಪಬೇಕಾದರೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಎಂದು ಹೇಳಿದರು.

ಕಾಂಗ್ರೇಸ್ ತತ್ವ ಸಿದ್ದಾಂತ ಒಪ್ಪಿ ಪಕ್ಷಕ್ಕೆ ಸೇರ್ಪಡೆ



■ ಕಾಯಕಯೋಗಿ ಸುದ್ದಿ

ದೇವನಹಳ್ಳಿ :ಬಿಜೆಪಿ ಮತ್ತು ಜೆಡಿಎಸ್ ಪಕ್ಷ ತೊರೆದು ಕಾಂಗ್ರೆಸ್ ತತ್ವ ಸಿದ್ದಾಂತ ಒಪ್ಪಿ ಪಕ್ಷಕ್ಕೆ ಸೇರ್ಪಡೆ ಯಾದರು, ಆಯಾ ಕ್ಷೇತ್ರದ ಬಯಕೆಗೆ ಅನ್ಯ ಪಕ್ಷಗಳ ನಾಯಕರು ನಮ್ಮ ಪಕ್ಷಕ್ಕೆ ಒಬ್ಬೊಬ್ಬರಾಗಿ ಬರುತ್ತಿದ್ದಾರೆ ಎಂದು ಸಚಿವ ಕೆ.ಎಚ್.ಮುನಿಯಪ್ಪ ಹೇಳಿದರು.

ದೇವನಹಳ್ಳಿ ತಾಲೂಕಿನ ಕಾಂಗ್ರೇಸ್ ಪಕ್ಷದ ಕಚೇರಿಯಲ್ಲಿ ನಡೆದ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಇವರು ನಮ್ಮ ಪಕ್ಷದ ಸಿದ್ಧಾಂತ, ಮಲ್ಲಿಕಾರ್ಜುನ ಖರ್ಗೆ ಅವರ ಅಧ್ಯಕ್ಷತೆ, ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರ ನಾಯಕತ್ವ ಒಪ್ಪಿ ಪಕ್ಷಕ್ಕೆ ಬಂದಿದ್ದಾರೆ. ಸ್ಥಳೀಯ ನಾಯಕರ ಜತೆ ಚರ್ಚೆ ಮಾಡಿ ಎಲ್ಲ ನಾಯಕರ ಸಮ್ಮುಖದಲ್ಲಿ ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುತ್ತಿದ್ದೇವೆ ಎಂದರು.

ಧರ್ಮ ಧರ್ಮಗಳ ನಡುವೆ ಕೋಮುಸೌಹರ್ದತೆಯನ್ನು ಮೂಡಿಸಲು ಹಾಗೂ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಕೊಟ್ಟಿದೆ ಮಂದಿನ ದಿನಗಳಲ್ಲಿ ವಿಜಯಪುರದ 23 ವಾರ್ಡಿಗೂ ತಾರತಮ್ಯವಿಲ್ಲದೇ ಪಕ್ಷಾತೀತವಾಗಿ ಅನುದಾನಗಳನ್ನು ಹಂಚಿಕೆ ಮಾಡಲಾಗುವುದು ಎಂದು ಹೇಳಿದರು.

ವಿಜಯಪುರದ 3 ,9.14 ,22 ಮತ್ತು 23 ನೇ ವಾರ್ಡಿನ ಮಹಿಳೆ, ಅಜಾಂಪಾಷಾ,ಜುಬೇ ಉಲ್ಲಾ ಸಾಬ್, ಮನ್ಸೂರ್ ಪಾಷಾ ಹಾಗೂ ಅಜ್ಜಾಂಪಾಷಾ ಸೇರಿದಂತೆ ಅವರ ಬೆಂಬಲಿಗರೊಡನೆ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರುಗಳಾದ ಮುನಿನರಸಿಂಹಯ್ಯ , ವಿ.ಮಂಜುನಾಥ್ ,ಸಿ.ಜಗನ್ನಾಥ್ ವಿ. ಶಾಂತಕುಮಾರ್ ,ಪ್ರಸನ್ನಕುಮಾರ್ ,ಎಸ್ ಜಿ ಮಂಜುನಾಥ್ ,ಸೋಮಣ್ಣ ,ಲಕ್ಷ್ಮೀಕಾಂತ, ನರಸಿಂಹಮೂರ್ತಿ ,ದುಬೈ ಮಂಜುನಾಥ್ ಬದಲೂರು ಎಸ್ ಪಿ . ಮುನಿರಾಜು, ಕೆ.ಆರ್.ನಾಗೇಶ್, ಕೋಡುಗುರ್ಕಿ ನಾರಾಯಣಸ್ವಾಮಿ ,ರಾಮಚಂದ್ರಪ್ಪ, ಸೇರಿದಂತೆ ಪಕ್ಷದ ಹಲವಾರು ಮುಖಂಡರು ಮತ್ತು ಕಾರ್ಯಕರ್ತರು ಇದ್ದರು.

ಪ್ರಜಾಪ್ರಭುತ್ವ ಉಳಿವಿಗೆ ಕೇಂದ್ರದಲ್ಲಿ ಕಾಂಗ್ರೆಸ್ ಅವಶ್ಯಕ



ದೇವನಹಳ್ಳಿ :ಬಡವರಿಗೆ ಬದುಕು ಕಟ್ಟಿಕೊಟ್ಟ ಪಕ್ಷ ಕಾಂಗ್ರೆಸ್ ಮಹಿಳೆಯರಿಗೆ ಆರ್ಥಿಕವಾಗಿ ಶಕ್ತ ತುಂಬಿದ ಪಕ್ಷ ಕಾಂಗ್ರೆಸ್. ಗ್ಯಾರಂಟಿ ಯೋಜನೆಗಳಿಗೆ ರಾಜ್ಯದಲ್ಲೆಡೆ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ. ರಾಜ್ಯದಲ್ಲಿ ಗ್ಯಾರಂಟಿ ಸರ್ಕಾರ ಅಸ್ತಿತ್ವಕ್ಕೆ ಬಂದಂತೆ ಕೇಂದ್ರಲ್ಲೂ ಗ್ಯಾರಂಟಿ ಸರ್ಕಾರ ರಚನೆಯಾಗಲಿದೆ ಬಹು ಮುಖ್ಯವಾಗಿ ಭಾರತ ದೇಶದಲ್ಲಿ ಪ್ರಜಾಪ್ರಭುತ್ವ ಉಳಿವಿಗೆ ಕೇಂದ್ರದಲ್ಲಿ ಕಾಂಗ್ರೆಸ್ ಅವಶ್ಯಕ ಎಂದು ಕೆಪಿಸಿಸಿ ಮಹಿಳಾ ಪ್ರಧಾನ ಕಾರ್ಯದರ್ಶಿ ಶಕೀಲಾ ಹೇಳಿದರು.

ದೇವನಹಳ್ಳಿ ಪಟ್ಟಣದಲ್ಲಿ 9ನೇ ವಾರ್ಡಿನ ಪ್ರತಿ ಮನೆಮನೆಗೂ ತೆರಳಿ ಚಿಕ್ಕಬಳ್ಳಾಪುರ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ರಕ್ಷಾರಾಮಯ್ಯ ರವರ ಪರವಾಗಿ ಮತಯಾಚಿಸಿ ಮಾತನಾಡಿದರು.

ಈ ವೇಳೆ ಸ್ಥಳೀಯರ ಸಮಸ್ಯೆಗಳನ್ನು ಆಲಿಸಿದ ಸಂದರ್ಭದಲ್ಲಿ ಪೆಟ್ರೋಲ್, ಡೀಸೆಲ್ ,ಅಡುಗೆ ಅನಿಲದರ ಏರಿಕೆಯಂ ಏರಿಕೆಯಿಂದಾಗಿರುವ ಸಂಕ?ದ ಕುರಿತು ನೋವು ತೋಡಿಕೊಂಡಿದ್ದಾರೆ .ದೇಶದಲ್ಲಿ ಬೆಲೆ ಏರಿಕೆ ಮತ್ತು ನಿರುದ್ಯೋಗ ಹೆಚ್ಚಾಗುತ್ತಿದೆ. ಇದಕ್ಕೆ ಕಡಿವಾಣ ಹಾಕಲು ಮತದಾರರು ಕಾಂಗ್ರೆ ಗೆ ಬೆಂಬಲ ನೀಡಬೇಕು. ಜನರ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಕಾಂಗ್ರೆಸ್ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದೆ. ಈಗಾಗಲೇ ರಾಜ್ಯದ ಜನತೆಯ ಮನೆಬಾಗಿಲಿಗೆ ಗೃಹಲಕ್ಷ್ಮಿ ಕಲಿಟ್ಟಿದ್ದು ಮುಂದೆ ಮಹಾಲಕ್ಷ್ಮಿ ಕೂಡ ಬರಲಿದ್ದಾಳೆ ಎಂದರು.

9ನೇ ವಾರ್ಡಿನ ಪುರಸಭಾ ಸದಸ್ಯ ಬಾಲರಾಜು ಮಾತನಾಡಿ ರಾಜ್ಯದಲ್ಲಿ ಕಾಂಗ್ರೆಸ್ ನ ಗ್ಯಾರಂಟಿ ಅಲೆ ಜೋರಾಗಿದೆ. ಗ್ಯಾರಂಟಿ ಅಲೆ ಮುಂದೆ ಯಾವ ಅಲೆಯೂ ಇಲ್ಲ. ಕಾಂಗ್ರೆಸ್ ನ ಪರಚಿ ಗ್ಯಾರಂಟಿಗಳ ಜನರ ವಿಶ್ವಾಸ ನಂಬಿಕೆಯನ್ನು ಹೆಚ್ಚಿಸಿದೆ. ಈ ಚುನಾವಣೆಯಲ್ಲಿ ಅವುಗಳೆಲ್ಲಾ ನನಗೆ ವರದಾನವಾಗಲಿದೆ ಎಂದು ಹೇಳಿದರು.

ಕೃಷಿಕರ ನಂತರ ಕಾರ್ಮಿಕ ವರ್ಗ ದೇಶದ ಅರ್ಥವ್ಯವಸ್ಥೆಗೆ ಆಡಿಪಾಯ. ಶ್ರಮಿಕ ವರ್ಗದ ಹಕ್ಕುಗಳನ್ನು ಮರಳಿಸಿ ಅವರ ಭವಿಷ್ಯ ರೂಪಿಸಬೇಕಿದೆ. ಸಂವಿಧಾನ ರಕ್ಷಣೆಗಾಗಿ, ಪ್ರಜಾಪ್ರಭುತ್ವದ ಉಳಿವಿಗಾಗಿ ಈ ಜಿಲ್ಲೆಯ ಸ್ವಾಭಿಮಾನದ ಅಸ್ತಿತ್ವಕ್ಕಾಗಿ ಮತದಾರರು ಕಾಂಗ್ರೆಸ್ ಬೆಂಬಲಿಸುವ ಮೂಲಕ ಜನಶಕ್ತಿ ನೀಡಬೇಕೆಂದು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ರಾಜ್ಯ ಕಾರ್ಯದರ್ಶಿ ಮಮತಾ , ರಾಜ್ಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಪಾರಿಮಿತ ,ರಾಜ್ಯ ಕಾಂಗ್ರೆಸ್ ವಕ್ತಾರೆ ಅಪ್ಶಾ,ಸಂಘಟನಾ ಕಾರ್ಯದರ್ಶಿ ಚಂದ್ರಕಲಾ ,ಭಾರತಿ, ಚಂದ್ರಕಲಾ, ಮಹಿಳಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರತ್ನ ,ಜಿಲ್ಲಾ ಕಾರ್ಯದರ್ಶಿ ಸರಸ್ವತಿ ,ಕಾಂಗ್ರೆಸ್ ಟೌನಿನ ಮುಖಂಡ ಬಾನು ಪ್ರಕಾಶ್, ಯಾದವ ಸಂಘದ ಉಸಾಧ್ಯಕ್ಷ ಮುನಿರಾಜು , ದೇವನಹಳ್ಳಿ ಟೌನ್ ಅಧ್ಯಕ್ಷೆ ಜ್ಯೋತಿ, ಬ್ಲಾಕ್ ಪ್ರಧಾನ ಕಾರ್ಯದರ್ಶಿ ಮಾಧವಿ ಕಾಂತರಾಜು, ಸದಸ್ಯರುಗಳಾದ ಉಷಾ, ಪುಷ್ಪ, ಪಾರ್ವತಿ ಸೇರಿದಂತೆ ಮತ್ತಿತರರು ಇದ್ದರು.

ವೆಚ್ಚದ ಮೇಲೆ ನಿಗಾ ಇಡುವುದು ಮುಖ್ಯ: ವೆಚ್ಚ ವೀಕ್ಷಕರು

ರಾಮನಗರ: ಮುಕ್ತ ಮತ್ತು ನ್ಯಾಯಸಮ್ಮತವಾಗಿ ಚುನಾವಣೆ ನಡೆಸಬೇಕು. ಚುನಾವಣೆ ನೀತಿ ಸಂಹಿತೆಯನ್ನು ಉಲ್ಲಂಘಿಸಿದರೆ ಪ್ರತಿಯೊಂದು ಘಟನೆಗಳನ್ನು ಸೂಕ್ಷ್ಮ ??ವಾಗಿ ಗಮನಿಸಬೇಕು ಎಂದು ವೆಚ್ಚ ವೀಕ್ಷಕರಾದ ಜಯರಾಘವನ್ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಏಪ್ರಿಲ್ ವೆಚ್ಚಗಳ ನೋಡೆಲ್ ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು. ಬ್ಯಾಂಕ್ ಖಾತೆಯಿಂದ ಒಂದು ಲಕ್ಷಕ್ಕು ಅಧಿಕವಾಗಿ ನಗದು ಪಡೆಯುವವರ ವಿವರಗಳನ್ನು ಪಡೆಯಬೇಕು ಹಾಗೂ ನಗದು ಪಡೆದವರ ಮೇಲೆ ನಿಗಾ ಇಡಬೇಕು, ಅಲ್ಲದೆ ಪ್ರತಿದಿನ ಇಪತ್ತೈದು ಸಾವಿರಗಳನ್ನು ಡ್ರಾ ಮಾಡುವವರ ಹಾಗೂ ಹತ್ತು ಲಕ್ಷ ಹಾಗೂ ಅದಕ್ಕೂ ಹೆಚ್ಚು ವ್ಯವಹಾರ ಮಾಡುವವರ ಮೇಲೆ ನಿಗಾ ಇಡುವಂತೆ ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ 28 ಪ್ರದೇಶಗಳನ್ನು ಅತಿಸೂಕ್ಷ್ಮ ?? ಪ್ರದೇಶಗಳೆಂದು ಗುರುತಿಸಲಾಗಿದ್ದು ಸದರಿ